ಸಂಪುಟ : 8 ಸಂಚಿಕೆ 303 ಪುಟ : 4 ಬೆಲೆ : 3.00 ಶನಿವಾರ ಜನೆವರಿ 13, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 8 Issue : 303 Pages : 4 Price : 3.00 Saturday JANUARY 13, 2024 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಜನವರಿ 13ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 15,16,17 ಶಹಾಪುರ ಪೇಟೆ, ಡಿಸಿ ಮಿಲ್ ರೋಡ್, ಜವಳಗಲ್ಲಿ, ಭಜಂತ್ರಿ ಓಣಿ, ಮೀನದ ಮಾರ್ಕೆಟ್ ರೋಡ್, ಮಹೇಂದ್ರಕರ್ ಸರ್ಕಲ್ ಲೈನ್, ಗಾಂಧಿ ಸರ್ಕಲ್ ಲೈನ್, ಶರಣ ಬಸವೇಶ್ವರ ಗುಡಿ ಲೈನ್, ಗಣೇಶ ಗುಡಿ ಲೈನ್ ಉಳಿದ ಭಾಗಗಳು.

ವಾರ್ಡ್ ನಂ. 31, 32 ದಾಸರ ಓಣಿ, ಸಿಕ್ಕಿಲಗಾರ ಓಣಿ, ಭಜಂತ್ರಿ ಓಣಿ, ಹಳೆ ಕಚೇರಿ, ಝೆಂಡಾ ಕಟ್ಟೆ, ತ್ರಿಕೋಟೇಶ್ವರ ರಸ್ತೆ ಉಳಿದ ಭಾಗಗಳು. ವಾರ್ಡ್ ನಂ. 21, 22 ಕರುಗಲ್ ಲೇಔಟ್, ವಾಲ್ಮೀಕಿ ಭವನ, ಕಮತರ ಪ್ಲಾಟ್, ಶಿಗ್ಗಾವಿಯವರ ಪ್ಲಾಟ್, ಟವರ್ ಕಂಬ,

ವಾರ್ಡ್ ನಂ. 4, 3 ಕುಂಬಾರ ಓಣಿ, ಬಣ್ಣದ ನಗರ, ಬಿಎಸ್‌ಎನ್‌ಎಲ್ ಆಫೀಸ್, ಕಣವಿ ಪ್ಲಾಟ್, ಹುಯಿಲಗೋಳ ರಸ್ತೆ ಪೆಟ್ರೋಲ್ ಬಂಕ್ ಉಳಿದ ಭಾಗಗಳು. ವಾರ್ಡ್ ನಂ. 27, 28 ಸ್ಟೇಡಿಯಂ ಸಜ್ಜನ ಕುಲಕರ್ಣಿ ಲೈನ್, ನಾಗರಕಟ್ಟಿ ಲೈನ್, ತುಪ್ಪದರ ಲೈನ್, ಕಮರಲ್ಲಿ ಮಠದ ಲೈನ್, ಮಲ್ಲಾಡದರ ಲೈನ್, ಕೆ ಹೆಚ್ ಪಾಟೀಲರ ಲೈನ್, ನಂದೀಶ್ವರ ಮಠದ ಹಿಂದಿನ ಭಾಗ, ರೊಟ್ಟಿ ಲೇಔಟ್, ಹೊಸಮನಿಯವರ ಲೈನ್.

ವಾರ್ಡ್ ನಂ. 2 ಸೆಟ್ಲಮೆಂಟ್ ಪೂರ್ತಿ ಭಾಗಗಳು. ವಾರ್ಡ್ ನಂ. 21, 22, 20,19 ಎಸ್ ಟಿ ಡಿ, ಗೌಳಿಯವರ ಲೈನ್, ಹುಲಿಗೆಮ್ಮ ದೇವಿ ಗುಡಿ, ಕೊಟ್ಟೂರ ಅವರ ಲೈನ್, ರಹಮತ್ ನಗರ 4 ಭಾಗಗಳು ಶರೀಫಜ್ಜನ ಗದ್ದುಗೆ, ಖಾನ್‌ತೋಟ.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

50 ಚದರ ಮೀಟರ್ ನಿವೇಶನದಲ್ಲಿ ಕಟ್ಟಡ ನಿರ್ಮಾಣಕ್ಕೆ ಯಾವುದೇ ನಿರ್ಬಂಧವಿಲ್ಲ: ಹೈಕೋರ್ಟ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದಲ್ಲಿ 50 ಚದರ ಮೀಟರ್‌ಗಿಂತಲೂ ಕಡಿಮೆ ಅಳತೆಯ ನಿವೇಶನದಲ್ಲಿ ಕಟ್ಟಡ ನಿರ್ಮಾಣಕ್ಕೆ ಯಾವುದೇ ನಿರ್ಬಂಧವಿಲ್ಲ ಎಂದು ಹೈಕೋರ್ಟ್ ಗುರುವಾರ ಹೇಳಿದೆ.

ಸೂರಣಗಿ ವಿದ್ಯುತ್ ದುರಂತ । ಸಚಿವ ಎಚ್.ಕೆ. ಪಾಟೀಲರಿಂದ ಮೃತರ ಕುಟುಂಬಕ್ಕೆ ಸಾಂತ್ವನ, ಪರಿಹಾರ ಚೆಕ್ ವಿತರಣೆ

ಬ್ಯಾನರ್ ಅಳವಡಿಕೆಗೆ ನೀತಿ–ನಿಯಮ ರೂಪಿಸುವ ಚಿಂತನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರ ತಾಲೂಕಿನ ಸೂರಣಗಿ ಗ್ರಾಮದಲ್ಲಿ ಜ.8ರಂದು ನಟ ಯಶ್ ಅಭಿಮಾನಿಗಳು ತಮ್ಮ ನೆಚ್ಚಿನ ನಟನ ಕಟೌಟ್ ನಿಲ್ಲಿಸುವ ಸಂದರ್ಭದಲ್ಲಿ ವಿದ್ಯುತ್ ಸ್ಪರ್ಶದಿಂದಾಗಿ ಮೃತಪಟ್ಟ ಯುವಕರ ಮನೆಗಳಿಗೆ ರಾಜ್ಯ ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಭೇಟಿ ನೀಡಿ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿ, ಪರಿಹಾರ ಚೆಕ್ ವಿತರಿಸಿದರು.

ಸೂರಣಗಿ ಗ್ರಾಮದಲ್ಲಿ ಜರುಗಿದ ದುರ್ಘಟನೆಯಲ್ಲಿ ಮೃತರಾದ ಹನುಮಂತಪ್ಪ ಮಜ್ಜೂರಪ್ಪ ಹರಿಜನ, ಮುರಳಿ ನೀಲಪ್ಪ ನಡುವಿನಮನಿ, ನವೀನ ನೀಲಪ್ಪ ಗಾಜಿ ಅವರ ಕುಟುಂಬಗಳಿಗೆ ಹಾಗೂ ಗಾಯಾಳುಗಳಾದ ಮಂಜುನಾಥ ಸಿದ್ದಪ್ಪ ಹರಿಜನ, ಹನುಮಂತ ಗಾಳೆಪ್ಪ ಹರಿಜನ ಹಾಗೂ ಪ್ರಕಾಶ ಶಿವಪ್ಪ ಮ್ಯಾಗೇರಿ ಅವರ ಕುಟುಂಬಗಳ ನೆರವಿಗೆ ಸರ್ಕಾರದ ವತಿಯಿಂದ ಅಗತ್ಯದ ಪರಿಹಾರ ವಿತರಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದ್ದರು. ಜಿಲ್ಲಾ ಉಸ್ತುವಾರಿ ಸಚಿವರ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು ಕೂಡಲೇ ಮೃತರ ಕುಟುಂಬಗಳಿಗೆ ತಲಾ 2 ಲಕ್ಷ ರೂ ಹಾಗೂ ಗಾಯಾಳುಗಳಿಗೆ ತಲಾ 50 ಸಾವಿರ ರೂ.ಗಳ ಪರಿಹಾರವನ್ನು ಘೋಷಣೆ ಮಾಡಿದ್ದರು.

ಸರ್ಕಾರದ ವತಿಯಿಂದ ಮೃತರ ಕುಟುಂಬಗಳಿಗೆ ಪರಿಹಾರದ ಚೆಕ್‌ಗಳನ್ನು ಸಚಿವ ಎಚ್.ಕೆ. ಪಾಟೀಲ ಶುಕ್ರವಾರ ಕುಟುಂಬದ ಸದಸ್ಯರಿಗೆ ವಿತರಿಸಿದರು. ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ



ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಸೂರಣಗಿ ಘಟನೆ ವಿಷಾದನೀಯವಾಗಿದೆ. ಮೃತರ ಕುಟುಂಬಕ್ಕೆ ಮಾದಿಗ ಅಭಿವೃದ್ಧಿ ನಿಗಮದಿಂದ ಸೌಲಭ್ಯ, ಸಹಾಯಧನ ಕೊಡಿಸುವ ಬಗ್ಗೆ ಚರ್ಚಿಸಿ ಕ್ರಮ ವಹಿಸಲಾಗುವುದು ಎಂದರು.

ಮಾತನಾಡಿದ ಸಚಿವ ಎಚ್.ಕೆ. ಪಾಟೀಲ, ಮೃತರ ಕುಟುಂಬಕ್ಕೆ ತುಂಬಲಾರದ ನಷ್ಟವಾಗಿದೆ. ಮೂವರು ಮೃತರ ಕುಟುಂಬಕ್ಕೆ ತಲಾ ಎರಡು ಲಕ್ಷ ಹಾಗೂ ಮೂವರು ಗಾಯಾಳುಗಳಿಗೆ ತಲಾ 50 ಸಾವಿರ ರೂ ಪರಿಹಾರದ ಚೆಕ್‌ಗಳನ್ನು ಇಂದು ವಿತರಿಸಲಾಗಿದೆ. ಘಟನೆಯಲ್ಲಿ ಇನ್ನೊಬ್ಬ ಗಾಯಾಳು ನಾಗರಾಜರನ್ನು ಇಂದು ಭೇಟಿಯಾದೆ. ಅವರಿಗೂ ಪರಿಹಾರ ಕೊಡಿಸಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದರು.

ಮೃತರ ಕುಟುಂಬಕ್ಕೆ ಭೂ ಒಡೆತನ ಯೊಜನೆಯಡಿ ಭೂಮಿ ನೀಡಲು ಅರ್ಜಿ ಸಲ್ಲಿಸಲು ತಿಳಿಸಲಾಗಿದೆ. ನಂತರ ಅವರಿಗೆ ಅನುಕಂಪದ ಆದಾರದಲ್ಲಿ ಭೂಮಿ ನೀಡಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು. ಸೂರಣಗಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರ ಹುದ್ದೆ ಖಾಲಿಯಿದೆ ಎಂಬ ಪತ್ರಕರ್ತರ ಪ್ರಶ್ನೆಗೆ, ಇನ್ನು ಮೂರು ದಿನಗಳಲ್ಲಿ ವೈದ್ಯರ ನಿಯೋಜನೆಗೆ ಕ್ರಮ ವಹಿಸಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಗಣ್ಯರಾದ ಸುಜಾತಾ ದೊಡ್ಡಮನಿ, ಚನ್ನಮ್ಮ ಕಳ್ಳಿಹಾಳ, ಬಿ.ಬಿ. ಅಸೂಟಿ, ಎಸ್.ಎನ್. ಬಳ್ಳಾರಿ, ಪ್ರಭು ಬುರಬುರೆ, ಆನಂದಸ್ವಾಮಿ ಗಡ್ಡದೇವರಮಠ, ಚನ್ನಬಸಪ್ಪ ಜಗಲಿ, ಕೊಟೆಪ್ಪ ವರ್ದಿ, ಪ್ರಕಾಶ ಕಳ್ಳಿಹಾಳ, ವಿರುಪಾಕ್ಷಪ್ಪ ಸಿರನಹಳ್ಳಿ, ಪಕ್ಕಿರೇಶ ಮ್ಯಾಟಣ್ಣನವರ, ಶಂಕ್ರಣ್ಣ ಶಿರನಹಳ್ಳಿ, ಚಂದ್ರಶೇಖರ ಶಿರನಹಳ್ಳಿ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್. ನೇಮಗೌಡ, ತಹಸೀಲ್ದಾರ ವಾಸುದೇವ, ತಾ.ಪಂ ಇಓ ಕೃಷ್ಣ ದರ್ಮರ ಮುಂತಾದವರಿದ್ದರು.

ಕಾನೂನು ರೂಪಿಸಲು ಚರ್ಚೆ

ಮೆರವಣಿಗೆ, ಸಮಾರಂಭ ಕಾರ್ಯಕ್ರಮಗಳನ್ನು ಏರ್ಪಡಿಸುವಾಗ ಇಂತ ಘಟನೆಗಳು ಮರುಕಳಿಸಬಾರದು. ಅದಕ್ಕಾಗಿ ಬ್ಯಾನರ್ ಬಂಟಿಂಗ್ ತಯಾರಿಸುವ ಅಳತೆ ಹಾಗೂ ಅವುಗಳನ್ನು ಅಳವಡಿಸುವ ಬಗ್ಗೆ ಸೂಕ್ತ ಕಾನೂನು, ನೀತಿ–ನಿಯಮ ರೂಪಿಸುವ ಬಗ್ಗೆ ಸರ್ಕಾರದಲ್ಲಿ ಚರ್ಚಿಸಲಾಗುವುದು ಎಂದರಲ್ಲದೆ, ಸೂರಣಗಿ ಘಟನೆಯ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವಿಷಯ ತಿಳಿಸಿದಾಗ ಅವರು ವಿಷಾದ ವ್ಯಕ್ತಪಡಿಸಿ, ಅವರ ಕುಟುಂಬಕ್ಕೆ ತಕ್ಷಣ ಸರ್ಕಾರದಿಂದ ಪರಿಹಾರ ನೀಡಲು ಹೇಳಿದರು ಎಂದು ಸಚಿವರು ತಿಳಿಸಿದರು.

ಜಿಲ್ಲಾ ಮಟ್ಟದ 'ಸ್ವಾಮಿ ವಿವೇಕಾನಂದ ಜಯಂತಿ' ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

ಸ್ವಾಮಿ ವಿವೇಕಾನಂದರ ಸಂದೇಶಗಳು ಸಾರ್ವಕಾಲಿಕ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಮಿ ವಿವೇಕಾನಂದರ ತತ್ವ–ಸಂದೇಶಗಳು ಸಾರ್ವಕಾಲಿಕ. ಅವರ ತತ್ವ ಸಿದ್ಧಾಂತಗಳನ್ನು ಇಂದಿನ ಯುವಕರು ಇನ್ನೂ ಹೆಚ್ಚು ಹೆಚ್ಚು ಅರಿತುಕೊಳ್ಳಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಶುಕ್ರವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಯುವ ಸಂಘಗಳ ಒಕ್ಕೂಟಗಳ ಸಂಯುಕ್ತ ಆಶ್ರಯದಲ್ಲಿ 2023–24ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಸ್ವಾಮಿ ವಿವೇಕಾನಂದ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಲಾ ಮಕ್ಕಳಿಗೆ ಸ್ವಾಮಿ ವಿವೇಕಾನಂದರ ಆದರ್ಶ ಗುಣಗಳನ್ನು ತಿಳಿಸುವ ಕೆಲಸವಾಗಬೇಕು. ಸಮಾಜದ ಬಗ್ಗೆ ಚಿಂತನೆ ಮಾಡುವುದರ ಜೊತೆಗೆ ವಿವೇಕಾನಂದರ ಗುಣಗಳಾದ ದೇಶ ರಕ್ಷಣೆ, ಸಹನೆ, ಔದಾರ್ಯ, ತಾಳ್ಮೆ ಇವುಗಳನ್ನು ಇಂದಿನ ಯುವಕರು ಮೈಗೂಡಿಸಿಕೊಳ್ಳಬೇಕು. ವಿವೇಕಾನಂದರು ವಿದೇಶದಲ್ಲಿಯೂ ಸಹ ನಮ್ಮ ದೇಶದ ಸಂಸ್ಕೃತಿಯ ಕೀರ್ತಿ ಪತಾಕೆಯನ್ನು ಹಾರಿಸಿದ ಮಹಾನುಭಾವರು. ಚಿಕ್ಯಾಗೋ ಧರ್ಮ ಸಮ್ಮೇಳನದಲ್ಲಿ ಅವರು ಮಾಡಿದ ಭಾಷಣವು ವಿದೇಶಿಗರಲ್ಲಿ ಭ್ರಾತೃತ್ವ ಭಾವನೆ ಮೂಡಿಸಿತು ಎಂದರು.

ಕೆವಿಎಸ್‌ಆರ್ ಪ.ಪೂ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯ ಅನಿಲ ವೈದ್ಯ ಉಪನ್ಯಾಸ ನೀಡಿ, ವಿವೇಕಾನಂದರ

ವಿವೇಕಾನಂದರು ಹೇಳಿದಂತೆ ಯುವಕರು ತಮ್ಮ ಏಳಿಗೆಗೆ ತಾವೇ ಶಿಲ್ಪಿಗಳಾಗಿರುತ್ತಾರೆ. ಗದಗ ಜಿಲ್ಲೆಯು ವಿವೇಕಾನಂದರ ಸಂದೇಶಗಳನ್ನು ವಿಶ್ವಕ್ಕೆ ಬಿತ್ತರಿಸುವ ಕೇಂದ್ರವಾಗಿ ಕೆಲಸ ಮಾಡುತ್ತಿದೆ. ಶಕ್ತಿಯೇ ಜೀವನ, ದೌರ್ಬಲ್ಯವೇ ಮರಣ ಎಂದು ಸ್ವಾಮಿ ವಿವೇಕಾನಂದರು ಹೇಳಿದಂತೆ ಇಂದಿನ ಯುವಕರು ಖಿನ್ನತೆಗೊಳಗಾಗದೇ, ಸಮಯ ವ್ಯರ್ಥ ಮಾಡದೇ ತಮ್ಮ ತಮ್ಮ ಕರ್ತವ್ಯಗಳನ್ನು ನಿಷ್ಠೆಯಿಂದ ಮಾಡಬೇಕು.

– ಡಾ. ಎಚ್.ಕೆ. ಪಾಟೀಲ.
ಜಿಲ್ಲಾ ಉಸ್ತುವಾರಿ ಸಚಿವರು, ಗದಗ.

ಆದರ್ಶಗಳ ಮೂಲಕ ಸಾಕ್ಷಾತ್ಕಾರ ಮಾಡಿಕೊಳ್ಳಬೇಕು. ಇಂದಿನ ಯುವಕರು ಜ್ಞಾನಾರ್ಜನೆ ಮಾಡಿ ಸಹನೆಯಿಂದ ಕೆಲಸ ನಿರ್ವಹಿಸಿದರೆ ಗುರಿ ಮುಟ್ಟಲು ಸಾಧ್ಯ. ಭವ್ಯ ಭಾರತ ಕಟ್ಟುವಲ್ಲಿ ವಿದ್ಯಾರ್ಥಿಗಳು ವಿವೇಕಾನಂದರ ಸಂದೇಶಗಳನ್ನು ಪಾಲಿಸಬೇಕು. ನಮ್ಮ ದೇಶದ ಸಂಸ್ಕೃತಿಯನ್ನು ಎತ್ತಿ ಹಿಡಿದ ಸ್ವಾಮಿ ವಿವೇಕಾನಂದರು, ಯಾವ ವ್ಯಕ್ತಿಯೂ ತನ್ನ ಆತ್ಮ ಗೌರವವನ್ನು ಕಳೆದುಕೊಳ್ಳಬಾರದು ಹಾಗೂ ಯಾರ ಆತ್ಮ ಗೌರವವನ್ನು ಕಳೆಯುವ ಕೆಲಸವನ್ನೂ ಮಾಡಬಾರದು ಎಂಬ ಸಂದೇಶ ನೀಡಿದ್ದಾರೆ ಎಂದು ವಿವರಿಸಿದರು.

ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ಸ್ವಾಮಿ ನಿರ್ಭಯಾನಂದ ಸರಸ್ವತಿ ಅವರು ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಯುವ ಶಕ್ತಿ ದೇಶದ ಸಂಪತ್ತಾಗಿದೆ. ಯುವಕರು ಆಧ್ಯಾತ್ಮಿಕತೆ ಮೈಗೂಡಿಸಿಕೊಳ್ಳುವುದರೊಂದಿಗೆ ದೇಶಪ್ರೇಮ ಹೊಂದಬೇಕು. ದೇಶದ ಸುಧಾರಣೆಗೆ ಶ್ರೇಷ್ಠ ಶಿಕ್ಷಕರು ಅಗತ್ಯ. ಶಿಕ್ಷಣ ವ್ಯವಸ್ಥೆ ಸರಿಯಾಗಿ ಕಾರ್ಯನಿರ್ವಹಿಸಿದರೆ ಮಾತ್ರ ದೇಶದ ಸುಧಾರಣೆ ಸಾಧ್ಯವಾಗುತ್ತದೆ. ಅಜ್ಞಾನದ ಅಂಧಕಾರವನ್ನು ತೊಲಗಿಸಿ ಜ್ಞಾನದ ಬೆಳಕಿನ ಕಡೆಗೆ ದಾರಿ ತೋರುವವನೇ ಗುರುವಾಗಿರುತ್ತಾನೆ. ಇಂದಿನ ತಾಯಂದಿರು ತಮ್ಮ ಮಕ್ಕಳನ್ನು ಸಂಸ್ಕಾರಯುತವಾಗಿ ಬೆಳೆಸಬೇಕು. ದೇಶದ ಪ್ರಜೆಗಳಲ್ಲಿ ಪ್ರಜ್ಞಾವಂತಿಕೆಯಿರುವುದು ಮುಖ್ಯವಾಗಿದೆ. ಇಂದಿನ ಯುವಕರು ನಿಸ್ವಾರ್ಥಿಗಳಾಗಿ ಸಮಾಜ ಸೇವೆಗೆ ತೊಡಗಬೇಕು. ವಿವೇಕಾನಂದರ ಸಂದೇಶಗಳು ಯುವಕರು ಸೇರಿದಂತೆ ಪ್ರತಿಯೊಬ್ಬರಿಗೂ ಅನುಕರಣೀಯವಾಗಿವೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಪ್ರೌಢಶಾಲಾ ವಿಭಾಗದ ಪ್ರಬಂಧ, ಭಾಷಣ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಹುಲಕೋಟಿ–ಗದಗದ ರಾಮಕೃಷ್ಣ ವಿವೇಕಾನಂದ ಸೇವಾ ಪ್ರತಿಷ್ಠಾನದ ಅಧ್ಯಕ್ಷರಾದ ಬ್ರಹ್ಮಚಾರಿ ಅದ್ವೈತ ಚೈತನ್ಯ (ಪುನೀತ್ ಮಹಾರಾಜ್) ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದರು.

ನಾಡಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿದೇಶಕ ಡಾ. ಶರಣು ಗೋಗೇರಿ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಬಿ.ಎ. ಯರಗುಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಮಾಜಿ ಶಾಸಕ ಡಿ.ಆರ್. ಪಾಟೀಲ, ಗಣ್ಯರಾದ ಗುರಣ್ಣಾ ಬಳಗಾನೂರ, ಬಸವರಾಜ ಕಟ್ಟಿಮನಿ, ಬಿ.ಬಿ. ಅಸೂಟಿ, ಪ್ರಭು ಬುರಬುರೆ, ಪೀರಸಾಬ ಕೌತಾಳ, ಶಾಲಾ–ಕಾಲೇಜು ವಿದ್ಯಾರ್ಥಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಗ್ಯಾರಂಟಿಗಳ ಮೂಲಕ ಜನರಿಗೆ ಆರ್ಥಿಕ, ಸಾಮಾಜಿಕ ಶಕ್ತಿ-ಸಿಎಂ

■ ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಬಡವರು ಹಾಗೂ ಮಧ್ಯಮ ವರ್ಗದವರಿಗೆ ಆರ್ಥಿಕವಾಗಿ, ಸಾಮಾಜಿಕವಾಗಿ ಶಕ್ತಿ ತುಂಬಿ ಮುಖ್ಯವಾಹಿನಿಗೆ ಬರುವಂತಾಗಬೇಕೆಂಬ ಉದ್ದೇಶದಿಂದ ಸಾರ್ವತ್ರಿಕ ಮೂಲ ಆದಾಯದ ತತ್ವದಂತೆ ಗ್ಯಾರಂಟಿ ಯೋಜನೆಗಳನ್ನು ಸರ್ಕಾರ ಜಾರಿ ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶುಕ್ರವಾರ ಶಿವಮೊಗ್ಗ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

1.18 ಕೋಟಿ ಮಹಿಳಾ ಯಜಮಾನಿಗೆ ತಿಂಗಳಿಗೆ 2000 ನೀಡುತ್ತಿರುವುದು ಸತ್ಯವಲ್ಲವೇ ? ಇದುವರೆಗೆ ಯಾವುದೇ ಜಾತಿ ಧರ್ಮ ಭಾಷೆ ಬೇಧವಿಲ್ಲದೇ 130 ಕೋಟಿ ಮಹಿಳೆಯರು ಶಕ್ತಿ ಯೋಜನೆಯ ಮೂಲಕ ಉಚಿತವಾಗಿ ಪ್ರಯಾಣಿಸಿರುವುದು ಸುಳ್ಳಾಗುವುದು ಸಾಧ್ಯವೇ? 200 ಯೂನಿಟ್ ವರೆಗೆ ಉಚಿತ ವಿದ್ಯುತ್1.51 ಕೋಟಿ ಜನರಿಗೆ ನೀಡಲಾಗುತ್ತಿದೆ. ಅನ್ನಭಾಗ್ಯ ಯೋಜನೆಯಡಿ 170 ರೂ. ಫಲಾನುಭವಿಗಳಿಗೆ ತಲುಪುತ್ತಿದೆ. ಈ ಎಲ್ಲ ಸತ್ಯಗಳನ್ನು ಪರಿಶೀಲನೆ ನಡೆಸಿ ಮಾಧ್ಯಮದವರು ಸತ್ಯವಾದುದನ್ನು ಬರೆಯಬೇಕು ಎಂದರು.

ಬಡವರಿಗೆ ಆರ್ಥಿಕ ಶಕ್ತಿ ತುಂಬಬೇಕು

ಗ್ಯಾರಂಟಿ ಯೋಜನೆಗಳಿಂದ ಒಂದು ಕುಟುಂಬಕ್ಕೆ 4ರಿಂದ 5 ಸಾವಿರ ರೂ.ಗಳು ಸೇರುತ್ತಿದ್ದು, ವರ್ಷಕ್ಕೆ 48 ರಿಂದ 50 ಸಾವಿರ ರೂ.ಗಳು ಸೇರುತ್ತದೆ. ಇದು ಬಡಜನರಿಗೆ ಸೌಲಭ್ಯ ನೀಡುತ್ತದೆ. ಬೆಲೆಯೇರಿಕೆ, ನಿರುದ್ಯೋಗ ಹೆಚ್ಚಾಗಿದ್ದು, ಬಡವರಿಗೆ ಕೊಂಡುಕೊಳ್ಳುವ ಶಕ್ತಿಯನ್ನು ಈ ಯೋಜನೆಗಳು ಹೆಚ್ಚಿಸುತ್ತವೆ ಎಂದರು.

ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಶಾಲೆ/ ಸಂಘ/ ಸಂಸ್ಥೆಗಳಿಗೆ ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಪಟ್ಟಣ ಪಂಚಾಯತಿ ಮಾಲೀಕತ್ವದ ವಿವಿಧ ನಾಗರಿಕ ಸೌಲಭ್ಯ ಉದ್ದೇಶಕ್ಕಾಗಿ ಮೀಸಲಿರಿಸಿದ ಖಾಲಿ ನಿವೇಶನಗಳನ್ನು 30 ವರ್ಷಗಳ ಅವಧಿಗೆ ಲೀಜ್ ನೀಡುವುದರ ಕುರಿತಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಇವರ ಹೆಸರಿನಲ್ಲಿ ಮಂಜೂರಿ ಮಾಡಲು ಮನವಿಯಲ್ಲಿ ರಿ.ಸ.ನಂ. 368/1 ಟಿ.ಪಿ.ಸಿ. ನಂ. 970 ಪ್ಲಾಟ್ ನಂ. 14ನೇದ್ದರ ನಾಗರಿಕ ಸೌಲಭ್ಯ ಉದ್ದೇಶಕ್ಕಾಗಿ ಮೀಸಲಿರಿಸಿದ ಖಾಲಿ ನಿವೇಶವನ್ನು ಕೋರಿ ಮನವಿ ಸಲ್ಲಿಸಿದರ ಮೇರೆಗೆ ಮುಳಗುಂದ ಪಟ್ಟಣ ಪಂಚಾಯತ್ ಅಧಿಕಾರಿಗಳು ಹಾಗೂ ತಾಲೂಕಾ ತಹಸೀಲ್ದಾರರು ಸ್ವೀಕರಿಸಿದ ನಡಾವಳಿಯಂತೆ ನಿವೇಶನವನ್ನು ಲೀಜ್ ನೀಡಲು ನಿರ್ಣಯಿಸಲಾಗಿದೆ.

ಶಾಲಾ / ಸಂಘ / ಸಂಸ್ಥೆಗಳಿಗೆ ನಾಗರಿಕ ಸೌಲಭ್ಯಕ್ಕಾಗಿ ಕಾಯ್ದಿರಿಸಿದ ನಿವೇಶನವನ್ನು 30 ವರ್ಷ ಅವಧಿಗೆ ಲೀಜ್ ನೀಡಲು ಯಾವುದಾದರೂ ತಂಟೆ ವ ತಕರಾರು ಇದ್ದಲ್ಲಿ ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ್ ಮುಳಗುಂದ ಇವರ ಹೆಸರಿನಲ್ಲಿ ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳ ಕಾರ್ಯಾಲಯಕ್ಕೆ ಪ್ರಕಟಣೆ ಹೊರಡಿಸಿದ 7 ದಿನಗಳೊಳಗೆ ಲಿಖಿತವಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯತ್ ಕಾರ್ಯಾಲಯ, ಮುಳಗುಂದ-ದೂರವಾಣಿ ಸಂಖ್ಯೆ 08372-280128 ಸಂಪರ್ಕಿಸಬಹುದಾಗಿದೆ.

ಕೆಎಸ್‌ಎಸ್ ಪ್ರೌಢಶಾಲೆಯಲ್ಲಿ ಕ್ಲಸ್ಟರ್ ಮಟ್ಟದ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಕೆಎಸ್‌ಎಸ್ ಪ್ರೌಢಶಾಲೆಯಲ್ಲಿ ಇತ್ತೀಚೆಗೆ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ ಗಜೇಂದ್ರಗಡ ತಾಲೂಕಾ ಘಟಕ ಹಾಗೂ ರೋಣ ಕ್ಷೇತ್ರ ಶಿಕ್ಷಣಾಧಿಕಾರಿ ಇವರ ಸಂಯುಕ್ತ ಆಶ್ರಯದಲ್ಲಿ ಕ್ಲಸ್ಟರ್ ಮಟ್ಟದ, ಎಸ್‌ಎಸ್‌ಎಲ್‌ಸಿ ಕಲಿಕೆಯಲ್ಲಿ ಹಿಂದುಳಿದ ಮಕ್ಕಳ ಇಂಗ್ಲಿಷ್, ವಿಜ್ಞಾನ ಮತ್ತು ಗಣಿತ ವಿಷಯಗಳ ಕಾರ್ಯಾಗಾರ ನಡೆಯಿತು.

ರೋಣ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎನ್. ಹುರಳಿಯವರು ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತೀರ್ಣರಾಗುವ ಕುರಿತು ಮಾರ್ಗದರ್ಶನ ನೀಡಿದರು. ರೋಣ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಬಸವರಾಜ ಅಂಗಡಿ, ರೋಣ ಶಿಕ್ಷಣ ಸಂಯೋಜಕ ಮಹಾಂತೇಶ ಎ. ಚುಳುಕಿ ಉಪಸ್ಥಿತರಿದ್ದರು.

ಸಂಪನ್ಮೂಲ ವ್ಯಕ್ತಿಗಳಾದ ಇಸ್ಮಾಯಿಲ್ ಆರಿ, ಪ್ರಕಾಶ ಮಾಳಿ, ಡಿ.ಎಸ್. ಬಡಿಗೇರ, ಎಸ್.ವಿ. ಹಳ್ಳಿಕೇರಿ. ಎಮ್.ವಿ. ಜಾಧವ, ಎಸ್. ಎಂ. ಹಳ್ಳದ ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಲು ಬಹಳ ಸರಳವಾದ ಶೈಲಿಯಲ್ಲಿ ಬೋಧಿಸಿದರು. ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಗಜೇಂದ್ರಗಡ ತಾಲೂಕಾ ಘಟಕದ ಅಧ್ಯಕ್ಷ ಬಿ.ಡಿ. ಯರಗೊಪ್ಪ, ಕಾರ್ಯದರ್ಶಿ ಪಿ.ಎನ್. ಹಿರೇಮಠ. ಕೋಶಾಧ್ಯಕ್ಷ ಎಮ್.ವಿ. ಬಿಂಗಿ, ಸಹ ಕಾರ್ಯದರ್ಶಿ ಎಮ್.ಎಚ್. ಸಿದ್ದಿ ಸೇರಿದಂತೆ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ನಿರ್ದೇಶಕ ಎಸ್.ಎಮ್. ಉಣಕಲ್ ಸ್ವಾಗತಿಸಿ, ವಂದಿಸಿದರು.

ಶ್ರೀ ಅನ್ನದಾನೇಶ್ವರ ಜಾತ್ರೆಯ ಇಂದಿನ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಹಾಲಕೆರೆ ಶ್ರೀ ಅನ್ನದಾನೇಶ್ವರ ಮಠದಲ್ಲಿ ನಡೆಯುತ್ತಿರುವ ಜಾತ್ರಾ ಮಹೋತ್ಸವದಲ್ಲಿ ಜ.14ರಂದು ಬೆಳಿಗ್ಗೆ 5ಕ್ಕೆ ಪೂಜ್ಯತ್ರಯರ ಗದ್ದುಗೆಗಳಿಗೆ ಮಹಾರುದ್ರಾಭಿಷೇಕ, ಬಿಲ್ವಾರ್ಚನೆ ಮಹಾ ಮಂಗಳಾರುತಿ ಜರುಗುವುದು. 10ಕ್ಕೆ ಜಂಗಮೋತ್ಸವ ಜರುಗಲಿದ್ದು, ಒಳ ಬಳ್ಳಾರಿಯ ಪೂಜ್ಯ ಬಸವಲಿಂಗ ಮಹಾಸ್ವಾಮಿಗಳು ನೇತೃತ್ವ ವಹಿಸಲಿದ್ದಾರೆ. ಸಂಜೆ 5ಕ್ಕೆ ಶ್ರೀ ಅನ್ನದಾನೇಶ್ವರರ 173ನೇ ಮಹಾ ರಥೋತ್ಸವ ಜರುಗಲಿದ್ದು, ಸಂಜೆ 6ಕ್ಕೆ ಕಾರ್ತಿಕೋತ್ಸವವು ಜರುಗಲಿದೆ.

ಸಂಜೆ 6.30ಕ್ಕೆ ಶಿವಾನುಭವ ಗೋಷ್ಠಿ ಜರುಗಲಿದೆ. ಹಾವೇರಿ ಹುಕ್ಕೇರಿ ಮಠದ ಪೂಜ್ಯ ಸದಾಶಿವ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದು, ಮಣಕವಾಡದ ಪೂಜ್ಯ ಅಭಿನವ ಮೃತ್ಯುಂಜಯ ಮಹಾ ಸ್ವಾಮಿಗಳು ಅಧ್ಯಕ್ಷತೆ ವಹಿಸಲಿದ್ದಾರೆ. ದರೂರಿನ ಪೂಜ್ಯ ಕೊಟ್ಟೂರು ಮಹಾಸ್ವಾಮಿಗಳು, ನಾಗಲಾಪುರದ ಪೂಜ್ಯ ನಿರಂಜನ ದೇಶಿಕರು, ಸೋಮಸಮುದ್ರದ ಸಿದ್ಧಲಿಂಗ ದೇಶಿಕರು, ಶ್ರೀಧರ ಗಡ್ಡೆಯ ಮರಿಕೊಟ್ಟೂರು ದೇಶಿಕರು, ಬೂದಗುಂಪದ ಸಿದ್ಧೇಶ್ವರ ದೇಶಿಕರು, ಆಡ್ನೂರಿನ ವಿಶ್ವೇಶ್ವರ ದೇವರು ಸಮ್ಮುಖವನ್ನು ವಹಿಲಿಸಲಿದ್ದಾರೆ.

ಆರ್.ಬಿ. ಪಾಟೀಲ, ಡಾ. ಬಿ.ಎನ್. ಪಾಟೀಲ, ಸಿದ್ದಣ್ಣ ಜಿ.ಬಂಡಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಹಾಲಕೆರೆಯ ದ್ಯಾಮಣ್ಣ ಮಾಸ್ತರ ಬಡಿಗೇರ ಹಾಗೂ ಸಂಗಡಿಗರಿಂದ ಸಂಗೀತ ಸೇವೆ ಜರುಗಲಿದ್ದು, ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಅಂಗ ಸಂಸ್ಥೆಗಳ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಪೂಜ್ಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳ ಹೃದಯದಲ್ಲಿ ತಮ್ಮ ಸದ್ಗುಣ, ವೈಭವಗಳಿಂದ ವಿರಾಜಿಸುವ ಆದರ್ಶ ಶಿಕ್ಷಕ

ಶಿಕ್ಷಣ ಕ್ಷೇತ್ರದ ಮಿನುಗುತಾರೆ ಎಲ್.ಜಿ. ಕುಬೇರ

ಮಾನವನು ಮರಣಾಧೀನ. ಪ್ರತಿಯೊಂದು ಜೀವಿಯು ಹುಟ್ಟಿದ ನಂತರ ಒಂದಲ್ಲ ಒಂದು ದಿನ ಮರಣಹೊಂದಬೇಕು. ಆದರೆ ಮಾನವನು ಜೀವಿತಾವಧಿಯಲ್ಲಿ ಮಾಡಿದ ಸಾಧನೆ, ಪರೋಪಕಾರ, ಕಲೆಗಳು ಮಾತ್ರ ಯಾವಾಗಲೂ ಅಜರಾಮರವಾಗಿರುತ್ತವೆ ಎಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡುತ್ತಿದ್ದ ನಮ್ಮ ತಂದೆಯವರಾದ ಎಲ್.ಜಿ. ಕುಬೇರ ಅವರ ಮಾತುಗಳು ಇನ್ನೂ ನನ್ನ ಕಿವಿಗಳಲ್ಲಿ ಪ್ರತಿಧ್ವನಿಸುತ್ತವೆ.

ಲಕ್ಷ್ಮಣರಾವ್ ಗೋ.ಕುಬೇರ ಅವರು ಇಂತಹ ಆದರ್ಶ ಗುರುಗಳ ಸಮಾಗಮ ಪರಮಾತ್ಮನ ಅನುಗ್ರಹದಿಂದ ಹಾಗೂ ಹಿರಿಯರ ಪುಣ್ಯದಿಂದಲೇ ಸಾಧ್ಯವಾದದ್ದು. ಪೂಜ್ಯ ಗುರುಗಳು ಹಾಗೂ ನನ್ನ ತಂದೆಯವರ ಸಮಾಗಮವನ್ನು ಪಡೆದ ವ್ಯಕ್ತಿ ಯಥಾಶಕ್ತಿ ಅವರ ಸೇವೆಯನ್ನು ಮಾಡುವುದು ಅವಶ್ಯ ಕರ್ತವ್ಯ. ಆದರೆ ಈ ನನ್ನ ಗುರುಗಳು ದೈಹಿಕ ಸೇವೆ, ಆರ್ಥಿಕ ಸೇವೆ ಮುಂತಾದ ಸೇವೆಗಳನ್ನು ಆಪೇಕ್ಷಿಸಿದವರಲ್ಲ, ಕಟು ದಾರಿದ್ರ್ಯದ ಸಮಯದಲ್ಲೂ ಯಾರಲ್ಲೂ ಏನೂ ಬೇಡಿದವರಲ್ಲ. ಮಾನ, ಸಮ್ಮಾನ,



ಪ್ರಶಸ್ತಿ, ಪ್ರತಿಷ್ಠೆಗಳಿಂದ ಅವರು ಬಹಳ ದೂರವಿದ್ದರು. ಹೀಗಿರುವಾಗ ಈ ಮಹಾನುಭಾವರಿಗೆ ಯಾವ ತರಹದ ಸೇವೆಯನ್ನು ಮಾಡುವುದು ಎಂಬ ಚಿಂತೆ ನನ್ನನ್ನು ಯಾವಾಗಲೂ ಪೀಡಿಸುತ್ತಿತ್ತು.

ಸಾತ್ವಿಕ, ಸಾಧಕ ಜೀವಿಗಳಾದ ಗೋಪಾಲರಾವ್ ಕುಬೇರ ಹಾಗೂ ಶ್ರೀಮತಿ ಲಕ್ಷ್ಮೀಬಾಯಿ ಕುಬೇರ ಇವರ ಉದರದಲ್ಲಿ ಎಲ್.ಜಿ. ಕುಬೇರ್ ಅವರು 1935 ಡಿಸೆಂಬರ್ 23ರಂದು ಶಿರಹಟ್ಟಿ ತಾಲೂಕಿನ ತಂಗೋಡದಲ್ಲಿ ಜನಿಸಿ, ಎಲೆಮರೆಯ ಹೂವಿನಂತೆ ಬಾಲೆಹೊಸೂರು ಗ್ರಾಮದಲ್ಲಿ ಬೆಳೆದರು. ಬಾಲ್ಯದಲ್ಲಿಯೇ ಆರೋಗ್ಯ ಹಾಗೂ ಆರ್ಥಿಕ ಸಮಸ್ಯೆ, ಕೌಟುಂಬಿಕ ಜವಾಬ್ದಾರಿಗಳಿದ್ದರೂ ಎದೆಗುಂದದೇ ವಿದ್ಯಾರ್ಜನೆಗಾಗಿ ಅವರ ಬಂಧುಗಳಾದ ಲಕ್ಷ್ಮೇಶ್ವರದ ಕೊಪ್ಪರ್ ಕೃಷ್ಣಾಚಾರ್ ಅವರ ಮನೆಯಲ್ಲಿ ಹೈಸ್ಕೂಲ್ ಪೂರೈಸಿ ಮುಂದೆ ಪದವಿ ಅಭ್ಯಾಸವನ್ನು ಧಾರವಾಡದ ಕರ್ನಾಟಕ ಕಾಲೇಜಿನಲ್ಲಿ ಪೂರೈಸಿದರು. ಆವಾಗಿನಿಂದಲೇ ತಮಗಿಂತ ಚಿಕ್ಕವರಿಗೆ ಮನೆಪಾಠ ಹೇಳಿಕೊಟ್ಟು ಗಳಿಕೆಯೊಂದಿಗೆ ಕಲಿಕೆ ಪ್ರಾರಂಭಿಸಿ ಸಂಸಾರ ಮುನ್ನಡೆಸಿದರು.

ಪದವಿಯ ನಂತರ ಗದುಗಿನ ವೀರನಾರಾಯಣನು ಇವರಿಗೆ ಕೈಬೀಸಿ ಕರೆದು ಆಶ್ರಯ ನೀಡಿದ್ದನು. ಎಲ್.ಜಿ. ಕುಬೇರರು 1963ರಲ್ಲಿ ಗದುಗಿನ ವಿದ್ಯಾದಾನ ಸಮಿತಿಯಲ್ಲಿ ಶಿಕ್ಷಕ ಕರ್ತವ್ಯ ನಿರ್ವಹಣೆಗೆ ಮುಂದಾದರು. ಅವರು ಇಂಗ್ಲೀಷ್, ಇತಿಹಾಸ, ಭೂಗೋಳದಲ್ಲಿ ಆಸಕ್ತಿ ಹೊಂದಿದ್ದರು. ತಮ್ಮ ಸಹೋದರ, ಸಹೋದರಿಯರ ತುಂಬು ಸಂಸಾರದೊಂದಿಗೆ ಗದುಗಿನಲ್ಲಿಯೇ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸಿದರು.

ಅವರು 1993-94ರಲ್ಲಿ ನಿವೃತ್ತಿ ಹೊಂದಿದರು. ಗದುಗಿನಲ್ಲಿನ ಯಾವುದೇ ಜಾತಿ-ಧರ್ಮ, ಬಡವ-ಬಲ್ಲಿದ ಎಂಬ ತಾರತಮ್ಯವಿಲ್ಲದೇ ಎಲ್ಲ ವಿದ್ಯಾರ್ಥಿಗಳಿಗೆ ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೇ ವಿದ್ಯಾದಾನ ಮಾಡಿದ ಸಾರ್ಥಕ ಭಾವ ಅವರ ಮೊಗದಲ್ಲಿತ್ತು. 2006ರಲ್ಲಿ ಅವರು ಇಹಲೋಕ ತ್ಯಜಿಸಿದರು. ಇಂದು ಅವರು ಪಂಚಭೌತಿಕ ಶರೀರದಿಂದ ಅದೃಶ್ಯರಾದರೂ ವಿದ್ಯಾರ್ಥಿಗಳ ಹೃದಯ ಜನಮಾನಸದಲ್ಲಿ ತಮ್ಮ ಸದ್ಗುಣ, ವೈಭವಗಳಿಂದ ವಿರಾಜಿಸುತ್ತಿದ್ದಾರೆ. ಇವರ ಆದರ್ಶಗಳೇ ನಮಗೆ ಮತ್ತು ಇಂದಿನ ಶಿಕ್ಷಕರಿಗೆ ದಾರಿದೀಪವಾಗಿವೆ.

– ಡಾ.ರಾಘವೇಂದ್ರ ಎಲ್.ಕುಬೇರ.
ಪಂಚಾಕ್ಷರಿ ನಗರ, ಗದಗ.

ಯುವಕ, ಯುವತಿಯರ ಭವಿಷ್ಯಕ್ಕೆ ಶಕ್ತಿ ತುಂಬುವದಕ್ಕಾಗಿ ಯುವನಿಧಿ ಜಾರಿ

ಯಾವ ಧರ್ಮದಲ್ಲಿ ಹಸಿದವರಿಗೆ ಅನ್ನ ಕೊಡುವುದಿಲ್ಲವೋ ಅಂಥ ಧರ್ಮದಲ್ಲಿ ನನಗೆ ನಂಬಿಕೆ ಇಲ್ಲ ಎಂದು ವಿವೇಕಾನಂದರು ಘೋಷಿಸಿದ್ದರು-ಸಿಎಂ

■ ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಯಾವ ಧರ್ಮದಲ್ಲಿ ಹಸಿದವರಿಗೆ ಅನ್ನ ಕೊಡುವುದಿಲ್ಲವೋ ಅಂಥ ಧರ್ಮದಲ್ಲಿ ನನಗೆ ನಂಬಿಕೆ ಇಲ್ಲ ಎಂದು ವಿವೇಕಾನಂದರು ಘೋಷಿಸಿದ್ದರು. ಇವರ ಜನ್ಮ ದಿನದಂದೇ ನನ್ನ ಯುವಕ ಯುವತಿಯರು ಭ್ರಮನಿರಸನರಾಗದಂತೆ ಅವರ ಭವಿಷ್ಯಕ್ಕೆ ಶಕ್ತಿ ತುಂಬುವ ಸಲುವಾಗಿ ಯುವನಿಧಿ ಜಾರಿ ಮಾಡುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ಶಿವಮೊಗ್ಗದಲ್ಲಿ ಲಕ್ಷಾಂತರ ಯುವಸಮೂಹದ ಸಮ್ಮುಖದಲ್ಲಿ ರಾಜ್ಯ ಸರ್ಕಾರದ ಐತಿಹಾಸಿಕ ಗ್ಯಾರಂಟಿ "ಯುವನಿಧಿ" ಯೋಜನೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಾನು ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸುರ್ಜೇವಾಲ ಅವರು ಚುನಾವಣಾ ಪೂರ್ಣ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಐದೂ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ.

ನಿರುದ್ಯೋಗ ಸಮಸ್ಯೆ, ರೈತರ ಸಮಸ್ಯೆ ಹೆಚ್ಚಾಗಿ, ಆಹಾರ ಪದಾರ್ಥಗಳ ಬೆಲೆ ಗಗನಕ್ಕೆ ಏರಿರುವ ಸಂದರ್ಭದಲ್ಲಿ ಸಮಾಜದ ಎಲ್ಲಾ ವರ್ಗಗಳ ಸಮಸ್ಯೆಗೆ ಪರಿಹಾರವಾಗಿ ನಾವು ಗ್ಯಾರಂಟಿ ಯೋಜನೆಗಳನ್ನು ರೂಪಿಸಿದೆವು. ಪ್ರಣಾಳಿಕೆಯಲ್ಲಿ ಘೋಷಿಸಿದೆವು. ಘೋಷಿಸಿದಂತೆ ಜಾರಿ ಮಾಡಿದ್ದೇವೆ. ಮೊದಲ ಗ್ಯಾರಂಟಿ ಯೋಜನೆಯಿಂದಾಗಿ 130 ಕೋಟಿ 28 ಲಕ್ಷ ಮಹಿಳೆಯರು, ಯುವತಿಯರು ಉಚಿತವಾಗಿ ಪ್ರಯಾಣ ಮಾಡಿದ್ದಾರೆ. 1 ಕೋಟಿ 65 ಲಕ್ಷ ಕುಟುಂಬಗಳಿಗೆ ಉಚಿತವಾಗಿ 200 ಯೂನಿಟ್

ವರೆಗೂ ಉಚಿತ ವಿದ್ಯುತ್ ನೀಡುತ್ತಿದ್ದೇವೆ. ಈ ಕೋಟಿ ಕುಟುಂಬಗಳು ನಯಾಪೈಸೆ ವಿದ್ಯುತ್ ಬಿಲ್ ಕಟ್ಟುವ ಹಾಗಿಲ್ಲ. ಇದೇ ರೀತಿ 5 ಕೆಜಿ ಅಕ್ಕಿ, 5 ಕೆಜಿ ಅಕ್ಕಿಯ ಹಣವನ್ನು ಪ್ರತೀ ಕುಟುಂಬಗಳಿಗೆ ಕೊಡುತ್ತಿದ್ದೇವೆ. 1 ಕೋಟಿ 17 ಲಕ್ಷ ಮಹಿಳೆಯರಿಗೆ, ಯುವತಿಯರಿಗೆ ಪ್ರತಿ ತಿಂಗಳು 2000 ರೂ ತಲುಪಿಸುತ್ತಿದ್ದೇವೆ. ಇಂಥಾ ಸಾಧನೆ ಹಿಂದೆ ಯಾವ ಕಾಲದಲ್ಲೂ ಆಗಿಲ್ಲ. ಇದನ್ನೆಲ್ಲಾ ಮಾಡಿದ್ದು ನಾವು. ನಮ್ಮದೇ ನುಡಿದಂತೆ ಮಾಡಿ ತೋರಿಸಿದ ಸರ್ಕಾರ.

ಇಂದು ಯುವನಿಧಿ ಜಾರಿ ಮಾಡಿದ್ದೇವೆ. ಯುವಕ ಯುವತಿಯರಿಗೆ ಹಣದ ಜತೆಗೆ ಉದ್ಯೋಗ ಪಡೆದುಕೊಳ್ಳಲು ಅಗತ್ಯವಾದ ಕೌಶಲ್ಯ ತರಬೇತಿಯನ್ನೂ ನೀಡಿ ಅವರಿಗೆ ಉದ್ಯೋಗ ಕೊಡಿಸುವ ದಿಕ್ಕಿನಲ್ಲಿ ನಮ್ಮ ಪ್ರಯತ್ನ ಮುಂದುವರೆಯಲಿದೆ. ಯುವಕ ಯುವತಿಯರು ಭ್ರಮನಿರಸನರಾಗದಂತೆ ಅವರ ಭವಿಷ್ಯಕ್ಕೆ ಶಕ್ತಿ ತುಂಬುವ ಸಲುವಾಗಿ ಈ ಯುವನಿಧಿ ಯೋಜನೆ ಜಾರಿ ಮಾಡಿದ್ದೇವೆ ಎಂದರು.

ವಿವೇಕಾನಂದರ ಜನ್ಮ ದಿನದಂದೇ ಯುವನಿಧಿ ಯೋಜನೆಯನ್ನು ನಾವು ಜಾರಿ ಮಾಡಿದ್ದೇವೆ. ಈಗಾಗಲೇ 70 ಸಾವಿರ ಯುವಕ ಯುವತಿಯರು ಯೋಜನೆಗೆ ನೋಂದಣಿ ಮಾಡಿಕೊಂಡಿದ್ದಾರೆ ಎಂದು ವಿವರಿಸಿದರು. ರಾಜೀವ್ ಗಾಂಧಿ ಅವರು ದೇಶದ ಯುವಕರ ಭವಿಷ್ಯಕ್ಕಾಗಿ ಸದಾ ತುಡಿಯುತ್ತಿದ್ದರು. ಅವರ ಆಶಯಕ್ಕೆ ಪೂರಕವಾಗಿ ಯುವನಿಧಿ ಯೋಜನೆ ಮತ್ತು ನಮ್ಮ ಸರ್ಕಾರ ಕೆಲಸ ಮಾಡಲಿದೆ ಎಂದರು.

ಆದ್ದರಿಂದ ಪ್ರತಿ ಯುವಕ ಯುವತಿಯರು ಯೋಜನೆಗೆ ನೋಂದಾಯಿಸಿಕೊಂಡು ಅನುಕೂಲ ಪಡೆದುಕೊಳ್ಳಿ ಎಂದು ಕರೆ ನೀಡಿದರು.

ಸಾಮಾಜಿಕ ನ್ಯಾಯದ ಬಗ್ಗೆ ಕೇವಲ ಭಾಷಣ ಮಾಡಿದರೆ ಸಾಲದು. ಅದಕ್ಕೆ ಕಾರ್ಯಕ್ರಮಗಳನ್ನು ರೂಪಿಸಬೇಕು. ಜಾರಿಗೆ ತರಬೇಕು. ನಮ್ಮ ಕಾಂಗ್ರೆಸ್ ಸರ್ಕಾರ ಮಾಡುತ್ತಿರುವುದು ಅದನ್ನೇ. ಹೋರಾಟದ ಹಿನ್ನೆಲೆಯ ಜಿಲ್ಲೆ ಶಿವಮೊಗ್ಗದಿಂದಲೇ "ರಾಜ್ಯ ಸರ್ವ ಜನಾಂಗದ ಶಾಂತಿಯ ತೋಟ" ಆಗಲಿ. ಇದಕ್ಕಾಗಿ ಜನ ಚಳವಳಿ ನಡೆಯಲಿ ಎಂದು ಕರೆ ನೀಡಿದರು.

ಡಿಸಿಎಂ ಡಿ.ಕೆ.ಶಿವಕುಮಾರ್, ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ಇಂಧನ ಸಚಿವ ಕೆ.ಜೆ.ಜಾರ್ಜ್, ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಕ್ರೀಡಾ ಸಚಿವ ನಾಗೇಂದ್ರ, ಮೀನುಗಾರಿಕಾ ಸಚಿವ ಮಾಂಕಳ ವೈದ್ಯ, ಮುಖ್ಯಮಂತ್

ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ವಿಶೇಷ ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಪೊಲೀಸ್ ಇಲಾಖೆಯ ಗದಗ ಶಹರ ಪೊಲೀಸ ಠಾಣೆ ವತಿಯಿಂದ ನಗರದ ಪ್ರಮುಖ ಬೀದಿ ಹಾಗೂ ವೃತ್ತಗಳಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳೊಂದಿಗೆ 'ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ವಿಶೇಷ ಅಭಿಯಾನ' ಹಮ್ಮಿಕೊಳ್ಳಲಾಗಿತ್ತು.

ಅಭಿಯಾನದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಜನ ಜಾಗೃತಿ ಜಾಥಾ ಹಳೆ ಬಸ್ ನಿಲ್ದಾಣ, ಶಹರ ಪೊಲೀಸ್ ಠಾಣೆ ವ್ಯಾಪ್ತಿಯ ಪ್ರಮುಖ ಬೀದಿ ಹಾಗೂ ವೃತ್ತಗಳಲ್ಲಿ ಸಂಚರಿಸಿತು. ಈ ಜಾಥಾದಲ್ಲಿ ನಗರದ ಆಂಗ್ಲೋ ಉರ್ದು ಶಾಲೆಯ ಮಕ್ಕಳು ಪಾಲ್ಗೊಂಡಿದ್ದರು. ಜನ ಜಾಗೃತಿ ಜಾಥಾದಲ್ಲಿ ಮಕ್ಕಳು ಮಾದಕ ದ್ರವ್ಯ ವಿರೋಧಿ ಘೋಷಣೆಗಳನ್ನು ಕೂಗುವ ಮೂಲಕ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಗದಗ ಶಹರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಸಿ.ಬಿ. ಪಾಟೀಲ, ಪಿಎಸ್‌ಐಗಳಾದ ಆರ್.ಆರ್. ಮುಂಡವಾಡಗಿ, ಭಾರತಿ ಬಂಕಾಪುರ, ಎಚ್.ಕೆ. ಪಾಟೀಲ ಸೇರಿದಂತೆ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಕನ್ನಡದಲ್ಲಿ ಕನ್ನಡ-ಕರ್ನಾಟಕ ರಸಪ್ರಶ್ನೆ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಜನಾಭಿವೃದ್ಧಿ ವೇದಿಕೆ ವತಿಯಿಂದ ಮುಂಡರಗಿ ತಾಲೂಕಿನ 34 ಪ್ರೌಢಶಾಲೆಗಳ ವಿದ್ಯಾರ್ಥಿಗಳು ಕನ್ನಡದಲ್ಲಿ ಕನ್ನಡ-ಕರ್ನಾಟಕ ರಸಪ್ರಶ್ನೆ ಕಾರ್ಯಕ್ರಮಕ್ಕೆ ಸುವರ್ಣ ಕೋಟಿ ಚಾಲನೆ ನೀಡಿದರು.

ಡೋಣಿಯ ಕರ್ನಾಟಕ ಪಬ್ಲಿಕ್ ಪ್ರೌಢಶಾಲೆ ವಿದ್ಯಾರ್ಥಿಗಳಾದ ವೀರಪ್ಪ ಹಡಗಲಿ, ಯಲ್ಲಪ್ಪ ಮೆಣಸಗಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದರೆ, ದ್ವಿತೀಯ ಸ್ಥಾನವನ್ನು ಶ್ರೀ ವೀರಭದ್ರೇಶ್ವರ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ವೆಂಕಟೇಶ ಮಲ್ಲಿಕೇರಿ, ಪ್ರಶಾಂತ ಹಡಗಲಿ, ತೃತೀಯ ಬಹುಮಾನವನ್ನು ಕೆ.ಎಚ್. ಕುರುಡಗಿ ಪ್ರೌಢಶಾಲೆ ಕೊರ್ಲಹಳ್ಳಿಯ ಕವಿತಾ ನಾಯಕ, ಸರೋಜಾ ಜುಟ್ಲಣ್ಣವರ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದರು.

ಮುಖಂಡರಾದ ಮಿಥುನ್ ಜಿ.ಪಾಟೀಲ್, ಲಿಂಗರಾಜಗೌಡ ಪಾಟೀಲ್ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗಣೇಶ ಹಾತಲಗೇರಿ ವಹಿಸಿದ್ದರು. ರಾಜ್ಯಾಧ್ಯಕ್ಷ ಹುಲ್ಲೇಶ ಭಜಂತ್ರಿ, ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ದಾವಲಸಾಬ ನಧಾಫ, ಜೆ.ಬಿ. ಅಮಾತೆ, ತಾಲೂಕಾ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಮ್. ಫಡ್ನೇಶಿ, ಕ್ಷೇತ್ರ ಸಮನ್ವಯಾಧಿಕಾರಿ ಗಂಗಾಧರ ಅಣ್ಣಿಗೇರಿ, ಸುಭಾಷ ಕಿತ್ತೂರ, ವಿ.ಜಿ. ಲಿಂಬಿಕಾಯಿ, ಎಮ್.ಬಿ. ನಾಗರಹಳ್ಳಿ, ಸಿ.ವ್ಹಿ. ಪಾಟೀಲ್, ಹೋನ್ನಪ್ಪ ಶಿರಹಟ್ಟಿ, ಉಮೇಶ ಹಿರೇಮಠ, ಮಂಜುನಾಥ ಕುರಿ, ಅಮರೇಶ ಹಿರೇಮಠ, ಆನಂದ ಕೊರ್ಲಹಳ್ಳಿ, ಸಂತೋಷ ಹಡಪದ, ಪರಶುರಾಮ ತಿಗರಿ ಶ್ರೀಕಾಂತ ಖಂಡ್ರಿ ಮುಂತಾದವರಿದ್ದರು.

ಎಸ್.ಎಮ್. ಕರ್ಜಗಿ ಸ್ವಾಗತಿಸಿದರು. ಬಿ.ಬಿ. ಬೆನಕನವಾರಿ ಕಾರ್ಯಕ್ರಮ ನಿರೂಪಿಸಿದರು. ಮಂಜುನಾಥ ಹೊಸಮನಿ ವಂದಿಸಿದರು.

ಸಂಭ್ರಮದ ಎಳ್ಳು ಅಮಾವಾಸ್ಯೆ ಆಚರಣೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಸೇರಿದಂತೆ ಹೋಬಳಿಯಲ್ಲಿ ಗುರುವಾರ ಎಳ್ಳು ಅಮಾವಾಸ್ಯೆಯ ಪ್ರಯುಕ್ತ ರೈತರು ಕುಟುಂಬದ ಸದಸ್ಯರೊಂದಿಗೆ ತಮ್ಮ ಹೊಲಗಳಿಗೆ ತೆರಳಿ ಪಾಂಡವರ ಪ್ರತಿಮೆ ಹಾಗೂ ಭೂದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಚೆರಗ ಚೆಲ್ಲುವ ಹಬ್ಬವನ್ನು ಆಚರಿಸಿದರು.

ಜೋಳದ ಹೊಲದಲ್ಲಿರುವ ಬನ್ನಿ ಗಿಡ ಹಾಗೂ ಐದು ಕಲ್ಲುಗಳಿಗೆ ಸುಣ್ಣ ಹಚ್ಚಿ ಪಾಂಡವರಿಗೆ ಮತ್ತು ಲಕ್ಷ್ಮೀ ದೇವಿಗೆ ಪೂಜಿಸಿ ನೈವೇದ್ಯ ಸಮರ್ಪಿಸಿದರು. ಎತ್ತುಗಳಿಗೆ ಝೂಲ ಹಾಕಿ ಕೋಡಣಸು, ಗೊಂಡೆ, ಹಣೆಕಟ್ಟುಗಳಿಂದ ಸಿಂಗರಿಸಿದ್ದು ವಿಶೇಷವಾಗಿತ್ತು. ಎತ್ತುಗಳು ಕೊರಳ ಮತ್ತು ಹಣೆಗೆಜ್ಜೆಯನ್ನು ನುಡಿಸುತ್ತ ಹೊಲಗಳ ಕಡೆಗೆ ಬಂಡಿ ಎಳೆದುಕೊಂಡು ಸಾಗುವುದರಲ್ಲಿ ಗ್ರಾಮೀಣ ಸೊಗಡು ಕಂಡು ಬಂದಿತು. ಪ್ರತಿ ವರ್ಷ ಚರಗ ಚೆಲ್ಲಿ ಮರಳಿ ಬರುವಾಗ ಕಡಲೆ ಗಿಡ ಕಿತ್ತುಕೊಂಡು ಬರುತ್ತಿದ್ದರು. ಆದರೆ, ಈ ಬಾರಿ ಕಡಲೆ ಬೆಳೆಗೆ ರೋಗ ಬಾಧೆಯಿಂದ ಹಾಗೂ ಮೂಡ ಗಾಳಿಗೆ ಎಲ್ಲ ಕಡಲೆ ಒಣಗಿ ಕಟಾವಿಗೆ ಬಂದಿದೆ. ಮಕ್ಕಳಿಗೆ ತಿನ್ನಲು ಕಡಲೆ ಇಲ್ಲದ್ದರಿಂದ ನಿರಾಶೆಯಿಂದ ಮರಳಿದರು.

ಹುಡ್ಕೋ ನಿವೇಶನ ಫಲಾನುಭವಿಗಳ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳಸಾಪೂರ ಗ್ರಾಮದಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ ನಿವೇಶನ ಪಡೆದ ಫಲಾನುಭವಿಗಳ ಸಭೆಯು ಡಾ. ಆರ್.ಎಚ್. ಕಬಾಡಿಯವರ ಅಧ್ಯಕ್ಷತೆಯಲ್ಲಿ ನಡೆಯಿತು.

ಕಳೆದ 12 ವರ್ಷಗಳಿಂದ ಪ್ರಗತಿ ಕಾಣದೇ ಹಾಳು ಬಿದ್ದ ಹುಡ್ಕೋ ಬಡಾವಣೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಿ, ನೀರಿನ ಸೌಕರ್ಯದ ಸ್ಥಿತಿಗತಿಗಳ ವಿವರ ಪಡೆಯಲು ಗ್ರಾ.ಪಂ ಕಚೇರಿಗೆ ತೆರಳಲು ನಿರ್ಧರಿಸಲಾಯಿತು.

ಕರ್ನಾಟಕ ಗೃಹ ಮಂಡಳಿಯಿಂದ ನಿವೇಶನ ಪಡೆದ ಫಲಾನುಭವಿಗಳಾದ ಎಸ್.ವಿ. ಪೊಲೀಸ್‌ಪಾಟೀಲ, ವಿ.ಬಿ. ಪಾಟೀಲ, ಆರ್.ಬಿ. ಹಬೀಬ, ಐ.ಎಸ್. ಕುಬಸದ, ಎಸ್.ಎಂ. ಸಂಕನಗೌಡರ, ಎಂ.ಟಿ. ಕಾಟೀಗರ, ಬಿ.ಕೆ. ಹೆಬಸೂರ, ರಾಜಶೇಖರ ಕಾಳಗಿ, ಪಿ.ಕೆ. ಕರಡಿ, ಸಿ.ವಿ. ಪಾಟೀಲ, ಬಿ.ಪಿ. ದುಡ್ಡಗಿ, ಸುನೀಲ ಭಾಂಡಗೆ ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.

ಜ.18ರಿಂದ 5 ದಿನಗಳ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಸ್ಟೆಟಸ್ಟಿಕಲ್ ಡೇಟಾ ಎನಲೈಸಿಸ್ ಫಾರ್ ರಿಸರ್ಚ್ ವರ್ಕ್ ಎಂಬ ವಿಷಯದ ಮೇಲೆ 2024ರ ಜನವರಿ 18ರಿಂದ 22ರವರೆಗೆ ಐದು ದಿನಗಳ ಕಾರ್ಯಾಗಾರವನ್ನು ಅಕಾಡೆಮಿ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಈ ಕಾರ್ಯಾಗಾರದಲ್ಲಿ ಸ್ನಾತಕೋತ್ತರ ವಿಜ್ಞಾನ ಪದವಿ ಮತ್ತು ಇಂಜನೀಯರಿಂಗ್ ಕಾಲೇಜು ಅಧ್ಯಾಪಕರು ಹಾಗೂ ಯುವ ಸಂಶೋಧನಾ ವಿದ್ಯಾರ್ಥಿಗಳು ಭಾಗಬಹಿಸಬಹುದಾಗಿದೆ.

ಕಾರ್ಯಾಗಾರದಲ್ಲಿ ಭಾಗವಹಿಸಲಿಚ್ಛಿಸುವ ಆಸಕ್ತ ಪ್ರತಿನಿಧಿಗಳು ಜನವರಿ 16ರೊಳಗಾಗಿ ನೋಂದಾಯಿಸಿಕೊಳ್ಳಬಹುದಾಗಿದ್ದು, ಹೆಚ್ಚಿನ ಮಾಹಿತಿಯನ್ನು ಅಕಾಡೆಮಿಯ ಜಾಲತಾಣ (http://www.kstacademy.in) ಹಾಗೂ ವೈಜ್ಞಾನಾಧಿಕಾರಿಯಾದ ವಿ.ಕೆ. ಶ್ರೀನಿವಾಸು ಅವರನ್ನು ಸಂಪರ್ಕಿಸಬಹುದಾಗಿದೆ.

ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದಲ್ಲಿ ಅರ್ಥಶಾಸ್ತ್ರ ಕಾರ್ಯಾಗಾರ

ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಅಳವಡಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅತ್ಯಮೂಲ್ಯವಾದ ವಿದ್ಯಾರ್ಥಿ ಜೀವನದಲ್ಲಿ ಏನನ್ನಾದರೂ ಸಾಧಿಸಬೇಕೆಂದರೆ ವಿದ್ಯಾರ್ಥಿ ಮೊದಲು ಈ ಜಗತ್ತಿನಲ್ಲಿ ಕಿವುಡನಾಗಿರಬೇಕು. ಸಾಧಿಸಿದ ನಂತರ ಮೌನಿಯಾಗಿರಬೇಕು. ಅಂದಾಗ ಮಾತ್ರ ತರಗತಿಯಲ್ಲಿ ಪಾಠ ಪ್ರವಚನಗಳು ಸುಗಮವಾಗಿ ನಡೆಯಲು ಸಾಧ್ಯ. ಶಿಕ್ಷಕರು ಹೇಳುವ ಪಾಠ-ಪ್ರವಚನವನ್ನು ಆಸಕ್ತಿಯಿಂದ ಯಾವ ವಿದ್ಯಾರ್ಥಿ ಆಲಿಸುತ್ತಾನೊ, ಅಂತಹ ವಿದ್ಯಾರ್ಥಿ ಮಾತ್ರ ಏನನ್ನಾದರೂ ಗ್ರಹಿಸಿಕೊಳ್ಳಬಲ್ಲ, ಮುಂದೆ ಜೀವನದಲ್ಲಿ ಅಮೂಲ್ಯವಾದುದನ್ನು ಸಾಧಿಸಬಲ್ಲ ಎಂದು ಗದುಗಿನ ಕೆವಿಎಸ್‌ಆರ್ ಪದವಿಪೂರ್ವ ಮಹಾವಿದ್ಯಾಲಯದ ಅರ್ಥಶಾಸ್ತ್ರದ ಹಿರಿಯ ಉಪನ್ಯಾಸಕ ವ್ಹಿ.ಎಸ್. ದಲಾಲಿ ಅಭಿಪ್ರಾಯಪಟ್ಟರು.

ಶುಕ್ರವಾರ ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದಲ್ಲಿ ಜರುಗಿದ 'ಅರ್ಥಶಾಸ್ತ್ರ' ಕಾರ್ಯಾಗಾರದಲ್ಲಿ ಮುಖ್ಯ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಕಲ್ಲು ಶಿಲೆಯಾಗಬೇಕಾದರೆ ಶಿಲ್ಪಿಯಿಂದ ಅನೇಕ ಉಳಿಪೆಟ್ಟುಗಳನ್ನು ತಿನ್ನಲೇಬೇಕು. ಅದೇ ರೀತಿ ಒಬ್ಬ ವಿದ್ಯಾರ್ಥಿ ಉತ್ತಮ ನಾಗರಿಕನಾಗಬೇಕಾದರೆ ತಂದೆ-ತಾಯಿಗಳಿಂದ ಅಥವಾ ಶಿಕ್ಷಕರಿಂದ ಆಯಾ ಕಾಲಕ್ಕೆ ಸೂಕ್ತ ರೀತಿಯಲ್ಲಿ ಶಿಕ್ಷೆ, ಮಾರ್ಗದರ್ಶನ, ತರಬೇತಿ ಪಡೆಯಲೇಬೇಕು. ಯಾರು ತಂದೆ-ತಾಯಿಗಳಿಂದ, ಶಿಕ್ಷಕರಿಂದ ಶಿಕ್ಷೆ ಪಡೆಯುವುದಿಲ್ಲವೋ ಮುಂದೆ ಆತ ಪೊಲೀಸರಿಂದ ಶಿಕ್ಷೆ ಪಡೆಯಲೇಬೇಕು. ಅದಕ್ಕೆಲ್ಲಾ ಅವಕಾಶ ಕೊಡದೇ ವಿದ್ಯಾರ್ಥಿ ಜೀವನದಲ್ಲಿಯೇ ತುಂಬಾ ಶಿಸ್ತಿನಿಂದ, ಪ್ರಾಮಾಣಿಕತೆಯಿಂದ ನಿರ್ವಹಿಸಿದಾದ್ದರೆ ಮುಂದೆ ಜೀವನದಲ್ಲಿ ನೀವು ಖಂಡಿತ ಉತ್ತಮ ನಾಗರಿಕರಾಗುವುದರಲ್ಲಿ ಸಂದೇಹವೇ ಇಲ್ಲ ಎಂದರು.

> ಅರ್ಥಶಾಸ್ತ್ರ ವಿಷಯವನ್ನು ಹೇಗೆ ಅರ್ಥೈಸಿಕೊಳ್ಳಬೇಕು ಎಂಬ ಕುರಿತು ಮಾತನಾಡಿದ ವ್ಹಿ.ಎಸ್. ದಲಾಲಿ, ಸರಳ ಮತ್ತು ಬೇಗನೆ ನೆನಪಿಗೆ ಬರುವ, ಸಂಪೂರ್ಣ ಅಂಕಗಳನ್ನು ಗಳಿಸುವ ಪ್ರಶ್ನೆಗಳನ್ನು ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಳ್ಳಬೇಕೇ ಹೊರತು ಕ್ಲಿಷ್ಟವಾದವುಗಳನ್ನು, ಅಂಕ ಕಡಿತಗೊಳಿಸುವ ಪ್ರಶ್ನೆಗಳನ್ನು ಆಯ್ಕೆ ಮಾಡಿಕೊಳ್ಳಬಾರದು. ಪ್ರಶ್ನೆ ಪತ್ರಿಕೆಯಲ್ಲಿರುವ ಪ್ರಶ್ನೆ ಸಂಖ್ಯೆಗಳನ್ನು ತಮ್ಮ ಉತ್ತರ ಪತ್ರಿಕೆಯಲ್ಲಿ ತಪ್ಪದೇ ಹಾಕಬೇಕೇ ಹೊರತು ತಮಗೆ ತಿಳಿದ ಸಂಖ್ಯೆಗಳನ್ನಲ್ಲ ಎಂದು ವಿವರಿಸಿದರು. ನಂತರ ವಿದ್ಯಾರ್ಥಿಗಳೊಂದಿಗೆ ಸಂವಹನ ಕಾರ್ಯಕ್ರಮ ಜರುಗಿತು. ವಿದ್ಯಾರ್ಥಿಗಳ ಎಲ್ಲ ರೀತಿಯ ಪ್ರಶ್ನೆಗಳಿಗೆ ಸಮಾಧಾನದಿಂದ ಪ್ರತಿಕ್ರಿಯಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಪ್ರೊಫೇಮಾನಂದ ರೋಣದ ಮಾತನಾಡಿ, ಮಹಾವಿದ್ಯಾಲಯದ ವಿದ್ಯಾರ್ಥಿಗಳು ಇಂತಹ ಕಾರ್ಯಾಗಾರದ ಪ್ರಯೋಜನ ಪಡೆದು, ಪರೀಕ್ಷೆಯಲ್ಲಿ ಉತ್ತಮ ಯಶ ಗಳಿಸಿ, ಮಹಾವಿದ್ಯಾಲಯಕ್ಕೂ, ಪಾಲಕ-ಪೋಷಕರಿಗೂ ಕೀರ್ತಿ ತರಬೇಕೆಂದು ಕರೆ ನೀಡಿದರು.

ಕಾರ್ಯಾಗಾರದಲ್ಲಿ ಸನ್ಮಾರ್ಗ ಪ.ಪೂ. ಮಹಾವಿದ್ಯಾಲಯದ ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಹಿರಿಯ ಆಂಗ್ಲ ಉಪನ್ಯಾಸಕ ಎಮ್.ಪಿ. ಸಂಕನೂರ, ಎಲ್ಲ ಉಪನ್ಯಾಸಕರು, ಮಹಾ ವಿದ್ಯಾಲಯದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕನ್ನಡ ಉಪನ್ಯಾಸಕ ಹೇಮಂತ ದಳವಾಯಿಯವರು ಸ್ವಾಗತಿಸಿ, ಅತಿಥಿಗಳನ್ನು ಸಭೆಗೆ ಪರಿಚಯಿಸಿದರೆ, ವಾಣಿಜ್ಯ ಉಪನ್ಯಾಸಕ ಡಿ.ಬಿ. ಕುಲಕರ್ಣಿ ವಂದಿಸಿದರು.

ಕಸಾಪದಿಂದ ಸಂಕ್ರಾಂತಿ ಕವಿಗೋಷ್ಠಿ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜ.13ರಂದು ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯ ಗದಗ ಇಲ್ಲಿ ಸಂಜೆ 5.30 ಗಂಟೆಗೆ ಸಂಕ್ರಾಂತಿ ಅಂಗವಾಗಿ ಕವಿಗೋಷ್ಠಿಯನ್ನು ಏರ್ಪಡಿಸಲಾಗಿದೆ.

ಕವಿಗೋಷ್ಠಿಯ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಕೊಪ್ಪಳದ ಖ್ಯಾತ ಗಝಲ್ ಕವಿಯಿತ್ರಿ ಅರುಣಾ ನರೇಂದ್ರ ಅವರು ಉದ್ಘಾಟಿಸುವರು.

ಕವಿಗೋಷ್ಠಿಯಲ್ಲಿ ಶಿಲ್ಪಾ ಕುರಿ, ಚಂದ್ರಕಲಾ ಇಟಗಿಮಠ, ಮಂಜುಳಾ ವೆಂಕಟೇಶಯ್ಯ, ಸ್ನೇಹಾ ಮರಿಗೌಡ್ರ, ಮಮತಾ ದೊಡ್ಡಮನಿ, ಡಾ. ರಾಜೇಂದ್ರ ಗಡಾದ, ಪದ್ಮಾ ಕಬಾಡಿ, ನೀಲಮ್ಮ ಅಂಗಡಿ, ಈಶ್ವರ ಕುರಿ, ಜಯಶ್ರೀ ಪಾಟೀಲ, ಭಾಗ್ಯಲಕ್ಷ್ಮಿ ಹುರಕಡ್ಲಿ, ಶಕುಂತಲಾ ಸಿಂಧೂರ, ಕೆ.ಜಿ. ಹೊನ್ನಾದೇವಿ, ಬಿ.ಬಿ. ಹರ್ತಿ, ಅಕ್ಕಮಹಾದೇವಿ ಕಮತ, ರಮಾ ಚಿಗಟೇರಿ, ಎಸ್.ಎಸ್. ಸೂಳಿಕೇರಿ, ಅಮೋಘವರ್ಷ ಮೊದಲಾದವರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಸಕ್ತರು, ಕವಿಗಳು, ಕಸಾಪ ಸದಸ್ಯರು ಭಾಗವಹಿಸಬೇಕೆಂದು ಕಾರ್ಯದರ್ಶಿ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಈರಣ್ಣ ಮಾದರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಶ್ರೀ ಅನ್ನದಾನೇಶ್ವರ ಜಾತ್ರೆಯ ಇಂದಿನ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಹಾಲಕೆರೆ ಶ್ರೀ ಅನ್ನದಾನೇಶ್ವರ ಮಠದಲ್ಲಿ ನಡೆಯುತ್ತಿರುವ ಜಾತ್ರಾ ಮಹೋತ್ಸವದಲ್ಲಿ ಜ.14ರಂದು ಬೆಳಿಗ್ಗೆ 5ಕ್ಕೆ ಪೂಜ್ಯತ್ರಯರ ಗದ್ದುಗೆಗಳಿಗೆ ಮಹಾರುದ್ರಾಭಿಷೇಕ, ಬಿಲ್ವಾರ್ಚನೆ ಮಹಾ ಮಂಗಳಾರುತಿ ಜರುಗುವುದು. 10ಕ್ಕೆ ಜಂಗಮೋತ್ಸವ ಜರುಗಲಿದ್ದು, ಒಳ ಬಳ್ಳಾರಿಯ ಪೂಜ್ಯ ಬಸವಲಿಂಗ ಮಹಾಸ್ವಾಮಿಗಳು ನೇತೃತ್ವ ವಹಿಸಲಿದ್ದಾರೆ. ಸಂಜೆ 5ಕ್ಕೆ ಶ್ರೀ ಅನ್ನದಾನೇಶ್ವರರ 173ನೇ ಮಹಾ ರಥೋತ್ಸವ ಜರುಗಲಿದ್ದು, ಸಂಜೆ 6ಕ್ಕೆ ಕಾರ್ತಿಕೋತ್ಸವವು ಜರುಗಲಿದೆ.

ಸಂಜೆ 6.30ಕ್ಕೆ ಶಿವಾನುಭವ ಗೋಷ್ಠಿ ಜರುಗಲಿದೆ. ಹಾವೇರಿ ಹುಕ್ಕೇರಿ ಮಠದ ಪೂಜ್ಯ ಸದಾಶಿವ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದು, ಮಣಕವಾಡದ ಪೂಜ್ಯ ಅಭಿನವ ಮೃತ್ಯುಂಜಯ ಮಹಾ ಸ್ವಾಮಿಗಳು ಅಧ್ಯಕ್ಷತೆ ವಹಿಸಲಿದ್ದಾರೆ. ದರೂರಿನ ಪೂಜ್ಯ ಕೊಟ್ಟೂರು ಮಹಾಸ್ವಾಮಿಗಳು, ನಾಗಲಾಪುರದ ಪೂಜ್ಯ ನಿರಂಜನ ದೇಶಿಕರು, ಸೋಮಸಮುದ್ರದ ಸಿದ್ಧಲಿಂಗ ದೇಶಿಕರು, ಶ್ರೀಧರ ಗಡ್ಡೆಯ ಮರಿಕೊಟ್ಟೂರು ದೇಶಿಕರು, ಬೂದಗುಂಪದ ಸಿದ್ಧೇಶ್ವರ ದೇಶಿಕರು, ಆಡ್ನೂರಿನ ವಿಶ್ವೇಶ್ವರ ದೇವರು ಸಮ್ಮುಖವನ್ನು ವಹಿಲಿಸಲಿದ್ದಾರೆ.

ಆರ್.ಬಿ. ಪಾಟೀಲ, ಡಾ. ಬಿ.ಎನ್. ಪಾಟೀಲ, ಸಿದ್ದಣ್ಣ ಜಿ.ಬಂಡಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಹಾಲಕೆರೆಯ ದ್ಯಾಮಣ್ಣ ಮಾಸ್ತರ ಬಡಿಗೇರ ಹಾಗೂ ಸಂಗಡಿಗರಿಂದ ಸಂಗೀತ ಸೇವೆ ಜರುಗಲಿದ್ದು, ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಅಂಗ ಸಂಸ್ಥೆಗಳ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಪೂಜ್ಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೈಹಿಕ ವಿಕಲಚೇತನರಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಅವರ ವತಿಯಿಂದ ದೈಹಿಕ ವಿಕಲಚೇತನರಿಗಾಗಿ ಅನುಷ್ಠಾನಗೊಳ್ಳುತ್ತಿರುವ ಬ್ಯಾಟರಿಚಾಲಿತ ವ್ಹೀಲ್ ಚೇರ್ ಯೋಜನೆಯಡಿ ವಿಕಲಚೇತನ ಫಲಾನುಭವಿಗಳು ತಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ವಿ.ಆರ್.ಡಬ್ಲ್ಯೂ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿರುವ ಯು. ಆರ್.ಡಬ್ಲ್ಯೂ ಹಾಗೂ ತಾಲೂಕು ಪಂಚಾಯತಿಯಲ್ಲಿರುವ ಎಮ್. ಆರ್.ಡಬ್ಲ್ಯೂಗಳಲ್ಲಿ ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಜನವರಿ 30ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ತಾಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಕಾರ್ಯನಿ

ಸರಕಾರಿ ನೌಕರರಿಂದ ಸಚಿವ ಎಚ್.ಕೆ. ಪಾಟೀಲರಿಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

7ನೇ ವೇತನ ಆಯೋಗದ ಅಧ್ಯಯನ ವರದಿಯನ್ನು ಶೀಘ್ರವೇ ಪಡೆದು ಸರಕಾರಿ ನೌಕರರ ವೇತನ ಭತ್ಯೆಗಳನ್ನು ಪೂರ್ಣ ಪ್ರಮಾಣದಲ್ಲಿ ಪರಿಷ್ಕರಿಸಿ ಆದೇಶ ಹೊರಡಿಸುವದು, ಹಳೆ ಪಿಂಚಣಿ ಯೋಜನೆ ಮರು ಜಾರಿಗೊಳಿಸುವದು, ಕರ್ನಾಟಕ ರಾಜ್ಯ ಆರೋಗ್ಯ ಸಂಜೀವಿನಿ ಯೋಜನೆ ಜಾರಿಗೊಳಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಗುಂಜೀಕರ ನೇತೃತ್ವದ ಸರಕಾರಿ ನೌಕರರ ಸಂಘದ ನಿಯೋಗ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಿತು.

ಶತಮಾನದ ಇತಿಹಾಸ ಹೊಂದಿರುವ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘ ರಾಜ್ಯದ 31 ಜಿಲ್ಲೆಗಳಲ್ಲಿ, 183 ತಾಲೂಕುಗಳಲ್ಲಿ ಒಟ್ಟು 6 ಲಕ್ಷ ಸದಸ್ಯರನ್ನೊಳಗೊಂಡು ಕ್ರಿಯಾಶೀಲವಾಗಿದೆ. ಆಯೋಗವನ್ನ 2 ಬಾರಿ ವಿಸ್ತರಿಸಿ, 13 ತಿಂಗಳಾದರೂ ಅಧ್ಯಯನ ವರದಿ ರಾಜ್ಯ ಸರಕಾರಕ್ಕೆ ತಲುಪಿಲ್ಲ. ಹೀಗಾಗಿ, ರಾಜ್ಯ ಸರಕಾರಿ ನೌಕರರ ಹಿತ ಕಾಯುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಕ್ಷಣವೇ 7ನೇ ವೆತನ ಆಯೋಗದ ವರದಿ ಅನುಷ್ಠಾನ ಮಾಡಲಿ ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಸಚಿವ ಡಾ. ಎಚ್.ಕೆ. ಪಾಟೀಲ, ಮನವಿಯನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಅನುಷ್ಠಾನ ಮಾಡಿಸುವ ಭರವಸೆಯನ್ನು ನೀಡಿದರು. ಈ ಸಂದರ್ಭದಲ್ಲಿ ಸಂಘದ ಗೌರವ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಕೋಶಾಧ್ಯಕ್ಷ ಸತೀಶ ಕಟ್ಟಿಮನಿ, ರಾಜ್ಯ ಪರಿಷತ್ ಸದಸ್ಯ ಡಾ. ಶರಣು ಗೋಗೇರಿ, ಪ್ರಧಾನ ಕಾರ್ಯದರ್ಶಿ ಕೆ.ಬಿ. ಕೊಣ್ಣೂರ, ಉಪಾಧ್ಯಕ್ಷರಾದ ಸಿದ್ದಪ್ಪ ಲಿಂಗದಾಳ, ಎಸ್.ಆರ್. ಬಂಡಿ, ಎಸ್.ಬಿ. ಬಿರಕಬ್ಬಿ, ಮಾನೇದ, ದುರಗಣ್ಣವರ, ಭರಮಪ್ಪ, ತಿಪ್ಪಣ್ಣವರ, ಯಳಮಲಿ, ಕಲಾಲ, ಮಲ್ಲಿಕಾರ್ಜುನ ಹನಸಿ, ಐ.ಎ. ಗಾಡಗೋಳಿ, ಎಸ್. ಕೆ. ಮಂಗಳಗುಡ್ಡ, ಶಿರಬಡಗಿ, ಸತೀಶ, ಮಂಜು ಬಂಡಿವಡ್ಡರ, ಮಲ್ಲಿಕಾರ್ಜುನ ಕಲಕಂಬಿ, ಕಿಲಬನವರ, ರಮೇಶ, ಎಸ್. ಆರ್. ಬಂಡಿ ಮುಂತಾದವರಿದ್ದರು.

ಶ್ರೀಮಠದಲ್ಲಿ ಜ.13ರಿಂದ 15ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು

ಹೂವಿನಶಿಗ್ಲಿ ಮಠದ ಜಾತ್ರಾ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಹೂವಿನಶಿಗ್ಲಿ ಮಠದ 45ನೇ ಜಾತ್ರಾ ಮಹೋತ್ಸವ ಹಾಗೂ ಲಿಂ. ನಿರಂಜನ ಮಹಾಸ್ವಾಮಿಗಳ 14ನೇ ಪುಣ್ಯ ಸ್ಮರಣೋತ್ಸವ ಅಂಗವಾಗಿ ಜರುಗಲಿದೆ.

ಜ.13ರ ಬೆಳಿಗ್ಗೆ ಮೈಸೂರು/ಬನ್ನಿಕೊಪ್ಪ ಜಪದಕಟ್ಟಿಮಠದ ಡಾ.ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಅವರಿಂದ ಲಿಂಗದೀಕ್ಷೆ ಹಾಗೂ ಅಯ್ಯಾಚಾರ, ಹತ್ತಿಮತ್ತೂರ ವಿರಕ್ತಮಠದ ನಿಜಗುಣ ಸ್ವಾಮೀಜಿ ಷಟಸ್ಥಲ ಧ್ವಜಾರೋಹಣ ನೆರವೇರುವುದು. ಸಂಜೆ 7 ಗಂಟೆಗೆ ಶಿರಹಟ್ಟಿಯ ಜ.ಫಕ್ಕೀರೇಶ್ವರ ಪುರಾಣ ಪ್ರವಚನ ಮಹಾಮಂಗಲವು ಧಾರವಾಡ ಮುರುಘಾಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ನಡೆಯಲಿದೆ.

ಬೆಳ್ಳಟ್ಟಿ ರಾಮಲಿಂಗೇಶ್ವರಮಠದ ಶ್ರೀ ಬಸವರಾಜ ಸ್ವಾಮೀಜಿ ಅಧ್ಯಕ್ಷತೆ ವಹಿಸಲಿದ್ದು, ಹಿರೇಮಣಕಟ್ಟಿ ಮುರುಪೇಂದ್ರಮಠದ ವಿಶ್ವಾರಾಧ್ಯ ಶಿವಾಚಾರ್ಯರು ಮತ್ತು ಬಳೂಟಗಿಯ ಶಿವಕುಮಾರ ದೇವರು ನೇತೃತ್ವ ವಹಿಸುವರು. ಸಾಹಿತಿ ಕೆ.ಎ. ಬಳಿಗೇರ ನುಡಿಮನಗೈಯುವರು. ಲಕ್ಷ್ಮೇಶ್ವರದ



ಭೂದಾನಿ ಮಹೇಶ ಬಸವರಾಜ ಉಪನಾಳ ಮತ್ತು ಗುರುಕುಲ ಸೇವಾದಾನಿಗಳಾದ ಓಂಪ್ರಕಾಶ ಜೈನ್ ಅವರಿಗೆ ಶ್ರೀರಕ್ಷೆ ಮಾಡಲಾಗುವುದು. ಗ್ರಾ.ಪಂ ಅಧ್ಯಕ್ಷೆ ಲಕ್ಷ್ಮವ್ವ ಗಡ್ಡೆಣ್ಣವರ ಸೇರಿ ಜನಪ್ರತಿನಿಧಿಗಳು, ಗಣ್ಯರು, ಹಿರಿಯರು ಉಪಸ್ಥಿತರಿರುವರು.

ಜ.14ರ ಸಂಜೆ 7ಕ್ಕೆ ಮುಂಡರಗಿ ಸಂಸ್ಥಾನ ಮಠದ ಡಾ. ಅನ್ನದಾನೀಶ್ವರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಲಿಂ.ನಿರಂಜನ ಮಹಾಸ್ವಾಮಿಗಳ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ ಜರುಗುವುದು. ಗುಡ್ಡದಅನ್ನೇರಿ ವಿರಕ್ತಮಠದ ಶಿವಯೋಗಿಶ್ವರ ಸ್ವಾಮೀಜಿ ಅಧ್ಯಕ್ಷತೆ ವಹಿಸುವರು. ಗಂಜಿಗಟ್ಟಿ ಹಿರೇಮಠದ ವೈಜನಾಥ ಶಿವಲಿಂಗೇಶ್ವರ ಸ್ವಾಮೀಜಿ ಹಾಗೂ ನವಲಗುಂದ ಗವಿಮಠದ ಬಸವಲಿಂಗ ಸ್ವಾಮೀಜಿ ನೇತೃತ್ವ ವಹಿಸುವರು. ವಿರೇಶ ಪಾಟೀಲ ನುಡಿನಮನಗೈಯುವರು. ದಾನಿಗಳಾದ ವಿಜಯಕುಮಾರ ಬಿರಾದಾರ, ರಾಮಣ್ಣ ಪೂಜಾರ, ಮಹೇಶ ದೊಡ್ಡಗಣ್ಣವರ ಅವರಿಗೆ ಶ್ರೀಮಠದಿಂದ ಶ್ರೀರಕ್ಷೆ ಮಾಡಲಾಗುದು. ಸಂಸದ ಶಿವಕುಮಾರ ಉದಾಸಿ, ಪ್ರದೀಪ ಶೆಟ್ಟರ ಸೇರಿದಂತೆ ಹಾಲಿ/ಶಾಸಕರು, ವಿ.ಪ ಸದಸ್ಯರು ಉಪಸ್ಥಿತರಿರುವರು. ಹಾವೇರಿಯ ಡಾ. ಅಶ್ವಿನಿ ವಸ್ತ್ರದ ಅವರಿಗೆ ಶ್ರೀಮಠದಿಂದ 'ವೈದ್ಯ ನಿರಂಜನ' ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಜ.15ರಂದು ಮಧ್ಯಾಹ್ನ 12ಕ್ಕೆ ಸಾಮೂಹಿಕ ವಿವಾಹ ಮಹೋತ್ಸವ ಕಾರ್ಯಕ್ರಮ ಸವಣೂರು ದೊಡ್ಡಹುಣಸೆ ಕಲ್ಮಠದ ಶ್ರೀ ಚನ್ನಬಸವ

ಸ್ವಾಮೀಜಿ ಸಾನ್ನಿಧ್ಯದಲ್ಲಿ ನೆರವೇರಲಿದೆ. ಅಧ್ಯಕ್ಷತೆಯನ್ನು ಮಠದ ಪಟ್ಟಾಧ್ಯಕ್ಷ ಶ್ರೀ ಚನ್ನವೀರ ಸ್ವಾಮೀಜಿ ವಹಿಸಲಿದ್ದಾರೆ. ಪಟ್ಟಾಧ್ಯಕ್ಷರ ತುಲಾಭಾರ, ಗುರುಕುಲದ ವಿದ್ಯಾರ್ಥಿಗಳಿಂದ ಮಲ್ಲಕಂಬ ಪ್ರದರ್ಶನ ನಡೆಯಲಿದೆ. ಸಂಜೆ ಕಡುಬಿನೋತ್ಸವ ನೆರವೇರಲಿದೆ. ಸಂಜೆ 6ಕ್ಕೆ 'ಮಹಾತ್ಮರ ಬದುಕು-ಬೆಳಕು' ಚಿಂತನ ಗೋಷ್ಠಿಯ ಸಾನ್ನಿಧ್ಯವನ್ನು ಹೊಸರಿತ್ತಿ ಗುದ್ದಲೀಶ್ವರಮಠದ ಸ್ವಾಮೀಜಿ ವಹಿಸುವರು.

ಅಕ್ಕಿಅಲೂರು ವಿರಕ್ತಮಠದ ಶ್ರೀ ಶಿವಬಸವ ಸ್ವಾಮೀಜಿ ಅಧ್ಯಕ್ಷತೆ, ಹಿರೇಮಲ್ಲನಕೇರಿ ವಿರಕ್ತಮಠದ ಶ್ರೀ ಬಸವರಾಜ ಸ್ವಾಮೀಜಿ ನೇತೃತ್ವ ವಹಿಸುವರು. ಶ್ರೀಮಠದ ತ್ರಿವಿಧ ದಾಸೋಹ ಸೇವೆಗೆ ಭಕ್ತಿಕಾಣಿಕೆ ಸಮರ್ಪಿಸಿದ ಲಕ್ಷ್ಮೇಶ್ವರ ಈರಯ್ಯ ಹಿರೇಮಠ, ಸಾಗರದ ಕೊಟ್ರಯ್ಯ ಕಲ್ಯಾಣಮಠ, ಕಲಾವಿದ ಚಂದ್ರು ಪತ್ತಾರ ಅವರಿಗೆ ಗೌರವಾರ್ಪಣೆ ಮಾಡಲಾಗವುದು. ಅತಿಥಿಗಳಾಗಿ ವಿಧಾನಸಭಾ ಉಪಸಭಾಪತಿ ರುದ್ರಪ್ಪ ಲಮಾಣಿ, ವಿ.ಪ ಮುಖ್ಯ ಸಚೇತಕ ಸಲೀಂ ಅಹ್ಮದ, ಮಾಜಿ ಸಿಎಂ ಕೆ.ಎಸ್. ಈಶ್ವರಪ್ಪ, ಬಿ.ಶ್ರೀರಾಮುಲು, ಶಾಸಕ ಡಾ.ಚಂದ್ರು ಲಮಾಣಿ ಸೇರಿ ಮಾಜಿ ಶಾಸಕರು, ಗಣ್ಯಮಾನ್ಯರು ಉಪಸ್ಥಿತರಿರುವರು.

3 ದಿನಗಳ ಕಾಲ ವಿವಿಧ ಕಲಾವಿದರಿಂದ ಸಾಂಸ್ಕೃತಿಕ ಕಾಯಕ್ರಮಗಳು ನಡೆಯಲಿವೆ ಎಂದು ಶ್ರೀಮಠದ ಪಟ್ಟಾಧ್ಯಕ್ಷರಾದ ಶ್ರೀ ಚನ್ನವೀರ ಮಹಾಸ್ವಾಮಿಗಳು ಮತ್ತು ಭಕ್ತ ಮಂಡಳಿ ಪ್ರಕಟಣೆ ತಿಳಿಸಿದೆ.

ಜ.14ರ ಬೆಳಿಗ್ಗೆ ನಿರಂಜನ ಶ್ರೀಗಳ ಕರ್ತೃ ಗದ್ದುಗೆಗೆ ರುದ್ರಾಭಿಷೇಕ, ಲಿಂ.ಶ್ರೀಗಳ ಭಾವಚಿತ್ರ ಮೆರವಣಿಗೆ ಹಾಗೂ ಗುರು ಗುಹೆಸಿದ್ದೇಶ್ವರ ಉತ್ಸವ ಮೂರ್ತಿಯ ಮೆರವಣಿಗೆ ಸೂರಣಗಿ ಹಾಗೂ ಯಲವಿಗಿ ಗ್ರಾಮದ ಪುರವಂತರ ವೀರಗಾಸೆಯೊಂದಿಗೆ ನಡೆಯಲಿದೆ. ಸಂಜೆ 4ಕ್ಕೆ ಶ್ರೀಮಠದ ಹಳೆಯ ವೈದಿಕ ವಿದ್ಯಾರ್ಥಿಗಳಿಂದ ಪೀಠಾಧ್ಯಕ್ಷರ ತುಲಾಭಾರ ನೆರವೇರಲಿದೆ. ಸಂಜೆ 5ಕ್ಕೆ ಡೊಳ್ಳು, ನಂದಿಕೋಲು, ಕೀಲುಕುದುರೆ ನೃತ್ಯ, ಸಕಲ ವಾದ್ಯ ವೈಭವ, ಅಪಾರ ಭಕ್ತ ಸಮೂಹದೊಂದಿಗೆ ರಥೋತ್ಸವ ಜರುಗಲಿದೆ.

ಭೂಮಿ ತಾಯಿಗೆ ಪೂಜೆ ಸಲ್ಲಿಸಿದ ರೈತಾಪಿ ಕುಟುಂಬ

ಸಂಭ್ರಮದ ಎಳ್ಳು ಅಮಾವಾಸ್ಯೆ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜನಪ್ರಿಯ ಹಬ್ಬವಾದ ಎಳ್ಳ ಅಮಾವಾಸ್ಯೆಯು ತನ್ನದೇ ಆದ ವೈಶಿಷ್ಟ್ಯವನ್ನು ಹೊಂದಿದೆ. ಸಾವಿರಾರು ವರ್ಷಗಳಿಂದಲೂ ಪಾಲಿಸಿಕೊಂಡು ಬಂದಿರುವ ಸಂಪ್ರದಾಯ, ಆಚರಣೆಗಳು ಇನ್ನೂ ಜೀವಂತವಾಗಿದ್ದು, ಉತ್ತರ ಕರ್ನಾಟಕದಲ್ಲಿ ಎಳ್ಳ ಅಮಾವಾಸ್ಯೆ ಹಬ್ಬವನ್ನು ವಿಶೇಷವಾಗಿ ಮಹಿಳೆಯರು ಉತ್ಸಾಹ-ಉಲ್ಲಾಸದಿಂದ ಪಟ್ಟಣದ ಸಮೀಪದ ಹೊಲಕ್ಕೆ ತೆರಳಿ ಚರಗ ಚೆಲ್ಲುವ ಮೂಲಕ ಆಚರಿಸಿದರು.

ಭೂತಾಯಿ ಹಾಗೂ ಬನ್ನಿ ಮಹಾಕಾಳಿ ವೃಕ್ಷಕ್ಕೆ ಪೂಜೆ ಸಲ್ಲಿಸಿ, ಹೊಲ-ಗದ್ದೆಗಳಿಗೆ ಚರಗ ಚೆಲ್ಲಲು ನಸುಕಿನಲ್ಲಿ ಎದ್ದು ಹೆಣ್ಣು ಮಕ್ಕಳು ವಿವಿಧ ಅಡುಗೆಗಳನ್ನು ಸಿದ್ಧಪಡಿಸಿ, ಜೋಳದ ಖಡಕ್ ರೊಟ್ಟಿ, ಸಜ್ಜಿ ರೊಟ್ಟಿ, ಅಕ್ಕಿ ರೊಟ್ಟಿ, ಚಪಾತಿ, ಎಣ್ಣೆಗಾಯಿ, ಬದನೆಕಾಯಿ,

ಮಡಿಕೆಕಾಳು, ಹೆಸರುಕಾಳು ಪಲ್ಯೆ, ಗುರೆಳ್ಳು ಚಟ್ನಿ, ಮೊಸರು ಚಟ್ನಿ, ಶೇಂಗಾ ಚಟ್ನಿ, ಕಡಲೆ ಚಟ್ನಿ, ಹಸಿರು ತರಕಾರಿ, ಒಗ್ಗರಣೆ ಅನ್ನ, ಬಿಳಿ ಅನ್ನ ಹೀಗೆ ಬಾಯಲ್ಲಿ ನೀರೂರಿಸುವ ವಿವಿಧ ಬಗೆಯ ಖಾದ್ಯಗಳೊಂದಿಗೆ ರೈತರು ಚಕ್ಕಡಿ ಹಾಗೂ ಟಂಟಂ ವಾಹನಗಳ ಮೂಲಕ ತಮ್ಮ ತಮ್ಮ ಹೊಲಗಳಿಗೆ ತೆರಳಿದರು.

ಭೂ ತಾಯಿಯ ಮಡಿಲಲ್ಲಿರುವ ಬನ್ನಿ ಮಹಾಕಾಳಿ ವೃಕ್ಷದ ಕೆಳಗೆ ಐದು ಕಲ್ಲುಗಳನಿಟ್ಟು ವಿಭೂತಿ, ಕುಂಕುಮ, ಧರಿಸಿ ಭಕ್ತಿಯಿಂದ ಪೂಜೆ ಸಲ್ಲಿಸಿದ ಬಳಿಕ ಬನ್ನಿ ಮಹಾಕಾಳಿ ವೃಕ್ಷದ ಸುತ್ತ ಐದು ಬಾರಿ 'ಹುಲಲ್ಲಿಗೋ ಚಲ್ಲಂಬರ್ಗೋ...' ಎಂದು ಶ್ರದ್ಧಾ-ಭಕ್ತಿಯಿಂದ ಘೋಷಣೆ ಕೂಗಿ, ಜೋಳ, ಕಡಲೆ, ಗೋಧಿ ಬೆಳೆಗಳ ನಡುವೆ ವಿಶೇಷವಾಗಿ ತಯಾರಿಸಿದ ಸಿಹಿ ಪದಾರ್ಥಗಳನ್ನು ಹೊಲದ ತುಂಬೆಲ್ಲ ಸಿಂಪಡಿಸಿ ಭಕ್ತಿ ಭಾವ ಮೆರೆದರು. ನಂತರ ಸಾಮೂಹಿಕವಾಗಿ ಭೂತಾಯಿ ಮಡಿಲಲ್ಲ ಕುಳಿತೇಜನವನ್ನು ಸವಿದರು.

ಪ್ರಸಕ್ತ ವರ್ಷದಲ್ಲಿ ಮಳೆ ಸಮರ್ಪಕವಾಗಿ ಸುರಿಯದ ಪರಿಣಾಮ ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶದ ಕೆಲಭಾಗದ ಹೊಲಗಳಲ್ಲಿ ಜೋಳ, ಗೋಧಿ, ಕಡಲೆ ಉತ್ತಮವಾಗಿ ಹುಟ್ಟದ ಕಾರಣ ಬದಕನ್ನು ಬೀದಿಗೆ ತಂದು ನಿಲ್ಲಿಸಿದ್ದರೂ ಧೃತಿಗೆಡದ ಅನ್ನದಾತರು ಸಂಪ್ರದಾಯ ಹಾಗೂ ಅದೇ ಆತ್ಮವಿಶ್ವಾಸದಿಂದ ರೈತರು ಎಳ್ಳ ಅಮಾವಾಸ್ಯೆ ಹಬ್ಬದ ದಿನದಂದು ವಿಶೇಷ ಪೂಜೆ ಸಲ್ಲಿಸಿದರು.

ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ರೋಣ ಮತಕ್ಷೇತ್ರದ ಶಾಸಕರಾದ ಜಿ.ಎಸ್. ಪಾಟೀಲ್ ಅವರನ್ನು ನವ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ರಾಜ್ಯಾಧ್ಯಕ್ಷ ಪಿ. ಸುಬ್ರಮಣ್ಯಂ ರೆಡ್ಡಿ ಅವರು ಸನ್ಮಾನಿಸಿ, ಗೌರವಿಸಿ ನೆನಪಿನ ಕಾಣಿಕೆ ನೀಡಿದರು.

ವಿಡಿಎಸ್ ಕ್ಲಾಸಿಕ್ ಶಾಲೆಯಲ್ಲಿ ಸ್ವಾಮಿ ವಿವೇಕಾನಂದ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಕ್ಲಾಸಿಕ್ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವೀರಸಂತ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಆಚರಿಸಲಾಯಿತು.

ಶಾಲೆಯ ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ ಮಾತನಾಡಿ, ಸ್ವಾಮಿ ವಿವೇಕಾನಂದರು ನಮ್ಮ ದೇಶ ಕಂಡ ಅಪರೂಪದ ಕ್ರಾಂತಿಕಾರಕ ವಿಚಾರಧಾರೆಯ ಮಹಾಪುರುಷರು. ವಿವೇಕಾನಂದರು ತಮ್ಮ ಚಿಂತನೆಯಿಂದಲೇ ಜಗತ್ತನ್ನು ಗೆದ್ದವರು. ವಿದೇಶಿಯರ ತುಳಿತ, ಅಪಮಾನಕ್ಕೆ ಬಿದ್ದಾಗ ಅಲ್ಲಿಂದ ಮೇಲಕ್ಕೆ ಎದ್ದು ನಿಲ್ಲಬೇಕೆಂದು ಭಾರತೀಯರಿಗೆ ಕರೆ ನೀಡಿದವರಾಗಿದ್ದಾರೆ ಎಂದರು.

ಶಿಕ್ಷಕಿ ಅರ್ಚನಾ ಗಿರಿತಿಮ್ಮಣ್ಣವರ ಮಾತನಾಡಿ, ಭಾರತದ ಕೀರ್ತಿ ಪತಾಕೆಯನ್ನು ಹಾಗೂ ಹಿಂದೂ ಧರ್ಮದ ಶ್ರೇಷ್ಠತೆಯನ್ನು ವಿಶ್ವದ ಮುಂದೆ ಎತ್ತಿ ಹಿಡಿದವರು ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರು. ವಿಶ್ವಧರ್ಮ ಸಮ್ಮೇಳನದಲ್ಲಿ ಪಾಲ್ಗೊಂಡ ಬಳಿಕ ಅಮೇರಿಕಾ, ಇಂಗ್ಲೆಂಡ್, ಯುರೋಪ ಹಾಗೂ ಭಾರತದಲ್ಲಿ ಅವರು ಮಾಡಿದ ಭಾಷಣ, ಅವರ ಪತ್ರಗಳು, ಅವರ ನಡೆಸಿದ ಚರ್ಚೆಗಳು ಇಂದಿಗೂ ಆಕರ ಗ್ರಂಥಗಳಾಗಿವೆ ಎಂದರು.

ಫಾತಿಮಾ ಸಂಗಮಕರ್, ಧೀರಜ್ ಪಾಟೀಲ ಹಾಗೂ ರಮ್ಯ ಬಡಿಗೇರ ಸ್ವಾಮಿ ವಿವೇಕಾನಂದರ ಜೀವನ ಮತ್ತು ಸಾಧನೆ ಕುರಿತು ಮಾತನಾಡಿದರು. ವಿದ್ಯಾರ್ಥಿಗಳಾದ ಪ್ರದ್ಯುಮ್ನ ಬಿಚಗತ್ತಿ, ದೇವಾನಂದ ಬೇವಿನಕಟ್ಟಿ ಹಾಗು ವಿಶ್ವನಾಥ ಜಗಾಪೂರ ಸ್ವಾಮಿ ವಿವೇಕಾನಂದರ ವೇಷಭೂಷಣ ತೊಟ್ಟು ಸಂದೇಶಗಳನ್ನು ಸಾರಿದರು.

ತೇಜಶ್ರೀ ಹಾದಿ ಸಂಗಡಿಗರು ಪ್ರಾರ್ಥಿಸಿದರು. ಎ.ಎಚ್. ಬಾಗಲಕೋಟೆ ಸ್ವಾಗತಿಸಿದರು. ಶಿಕ್ಷಕಿ ವೀಣಾ ನಾಯಕ್ ನಿರೂಪಿಸಿದರು, ಶ್ವೇತಾ ಮೇಲಗಿರಿ ವಂದಿಸಿದರು. ರೇಣುಕಾ ವೆಂಕಟಾಪುರ ಸೇರಿದಂತೆ ಶಾಲೆಯ ಸಮಸ್ತ ಶಿಕ್ಷಕ/ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಸಿಐಟಿಯುನಿಂದ ಸಹಿ ಸಂಗ್ರಹ ಚಳುವಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಲೆ ಏರಿಕೆ ತಡೆಗಟ್ಟುವದು, ರೈತ ವಿರೋಧಿ ಕಾನೂನುಗಳ ವಾಪಸಾತಿ, ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ಖಾತ್ರಿಗೊಳಿಸಲು, ಕಾರ್ಮಿಕ ವಿರೋಧಿ ಸಂಹಿತೆಗಳ ವಾಪಸಾತಿ, ಸಂಘಟಿತ ಕಾರ್ಮಿಕರಿಗೆ ಕನಿಷ್ಠ ವೇತನ, ಸೇವಾ ಭದ್ರತೆ ನೀಡಲು ಆಗ್ರಹಿಸಿ ಸಿಐಟಿಯು ಗದಗ ಜಿಲ್ಲಾ ಘಟಕದ ವತಿಯಿಂದ ಸಹಿ ಸಂಗ್ರಹ ಚಳುವಳಿಯನ್ನು ನಗರದ ಗಾಂಧಿ ವೃತ್ತದಲ್ಲಿ ಹಮ್ಮಿಕೊಂಡಿತ್ತು.

ಬಸವರಾಜ ಮಂತೂರ ಚಳುವಳಿ ಉದ್ಘಾಟಿಸಿ ಮಾತನಾಡಿ, ಶ್ರಮಿಕರ ಬದುಕನ್ನು ಉಳಿಸಲು ಜ.23ರಂದು ಜಿಲ್ಲಾ ಕೇಂದ್ರಗಳಲ್ಲಿ ಹಮ್ಮಿಕೊಂಡಿರುವ ಸಂಸದರ ಕಚೇರಿ ಚಲೋ ಜಾಥಾ ಯಶಸ್ವಿಗೊಳಿಸಲು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ ನಿಮಿತ್ತ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಸಲ್ಲಿಸುವ ಮೂಲಕ ಆಚರಿಸಲಾಯಿತು. ಮಹೇಶ ಹಿರೇಮಠ, ಯಶೋಧಾ ಬೆಟಗೇರಿ, ನಾಗರತ್ನ ಬಡಿಗಣ್ಣವರ, ವಿಜಯಲಕ್ಷ್ಮೀ ಚಲವಾದಿ, ರೇಣುಕಾ ತಳವಾರ, ಸಿದ್ದಲಿಂಗಪ್ಪ ಶ್ಯಾಗೋಟಿ, ಶಾರದಾ ಸೊರಟೂರ, ರುಕ್ಮಿಣಿ, ಚನ್ನಮ್ಮ ಶ್ಯಾವಿ, ವಾಸಂತಿ ಬಿದರನ್ನವರ, ಮಂಗಲಾ ಯಂಡಿಗೇರಿ, ಲಕ್ಷ್ಮವ್ವ ಕಳಸಣ್ಣವರ, ಸಾವಿತ್ರಿ, ಕಲ್ಯಾಣಿ ಸೇರಿದಂತೆ ಅನೇಕ ಕಾರ್ಮಿಕರು ಉಪಸ್ಥಿತರಿದ್ದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ಎದುರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಮೂರ್ತಿಯ ಪರಿಸರದಲ್ಲಿ ನಾಮಫಲಕ ಸೇರಿದಂತೆ ಶಿಥಿಲಗೊಂಡಿರುವ ಆವರಣವನ್ನು ನಗರಸಭೆಯ ವಾರ್ಡ್ ನಂ. 13ರ ಸದಸ್ಯ ಮುತ್ತು ಮುಶಿಗೇರಿ ನೇತೃತ್ವದಲ್ಲಿ ವಾರ್ಡಿನ ಹಿರಿಯರು, ಯುವಕರು, ಹಾಗೂ ಸಂಗೊಳ್ಳಿರಾಯಣ್ಣನ ಅಭಿಮಾನಿಗಳ ಒತ್ತಾಯದ ಮೇರೆಗೆ ನವೀಕರಣಗೊಳಿಸಲಾಯಿತು.

ಜಾಕೀರಹುಸೇನರಿಗೆ 'ಆರ್ಟಿಸ್ಟ್ ಆಫ್ ದ ಇಯರ್' ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಪಶ್ಚಿಮ ಬಂಗಾಳದ ಯು.ಎಸ್. ಆರ್ಟ್ ಗ್ಯಾಲರಿ ಆಶ್ರಯದಲ್ಲಿ ರಾಜ್ಯ ಮತ್ತು ಅಂತಾರಾಷ್ಟ್ರೀಯ ಕಲಾವಿದರ ಕಲಾಕೃತಿಗಳ ಪ್ರದರ್ಶನ ಮತ್ತು ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

ಈ ಕಲಾ ಪ್ರದರ್ಶನದಲ್ಲಿ ಗದಗ ಜಿಲ್ಲೆಯ ಯುವ ಚಿತ್ರ ಕಲಾವಿದರಾದ ಡಾ. ಜಾಕೀರಹುಸೇನ ಎಂ.